ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ

Editor : MARUTI BASAVANTAPPA HOSAMANI

Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

RNI REG No. : KARKAN/2016/75068

SIHI KAHI

KANNADA DAILY MORNING

BAGALKOT

Volume : 07 | Issue : 115 | Wednesday 08-01-2025 | E-mail : maruti.b.hosamani76@gmail.com | Page: 4 | Price : Rs. 1/-

ತಳವಾರ ಸಮುದಾಯಕ್ಕೆ ಕಾಂಗ್ರೆಸ್ ಅವಹೇಳನ: ಅಧ್ಯಕ್ಷ ರೇವಣ್ಣ ಹತ್ತಳ್ಳಿ

ಇಂಡಿ : ತಳವಾರ ಸಮುದಾಯಕ್ಕೆ ಕಾಂಗ್ರೆಸ್ ಪಕ್ಷದ ಪ.ಪಂ ವಿಭಾಗದ ಜಿಲ್ಲಾಧ್ಯಕ್ಷ ಹುದ್ದೆ ನೀಡಿ ಏಕಾಏಕಿ ತೆಗಿದಿದ್ದು, ಅತ್ಯಂತ ನೋವಾಗಿದ್ದು, ಸಮುದಾಯಕ್ಕೆ ಅವಹೇಳನ ಮಾಡಿದ್ದಂತಾಗಿದೆ. ಇದನ್ನು ತೀವ್ರವಾಗಿ ತಳವಾರ ಸಮಾಜ ಖಂಡಿಸುತ್ತೆದೆ ಎಂದು ಅಖಿಲ ಕರ್ನಾಟಕ ನಾಯಕ ತಳವಾರ ಜನಾಂಗದ ಹಿತ ರಕ್ಷಣಾ ಸಮಿತಿಯ ಇಂಡಿ ತಾಲ್ಲೂಕು ಅಧ್ಯಕ್ಷ ರೇವಣ್ಣ ಹತ್ತಳ್ಳಿ ಆಕ್ರೋಶ ವ್ಯಕ್ತಪಡಿಸಿ ಮಾತನಾಡಿದರು. ಮಂಗಳವಾರ ಪಟ್ಟಣದ ಖಾಸಗಿ ಹೊಟೆಲ್ ಯೊಂದರಲ್ಲಿ ಕರೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದರು. ವಿಜಯಪುರ ಜಿಲ್ಲೆಯ ಇಂಡಿ ತಾಲ್ಲೂಕಿನ ತಳವಾರ ಸಮಾಜದ ಮುಖಂಡ ಸಣ್ಣಪ್ಪ ತಳವಾರ ಅವರನ್ನು ಕಾಂಗ್ರೆಸ್ ಪಕ್ಷದ ಪ.ಪಂ ಜಿಲ್ಲಾಧ್ಯಕ್ಷ ಹುದ್ದೆ ನೀಡಿ, ವಾರದಲ್ಲಿಯೇ ಏಕಾಏಕಿ ಹುದ್ದೆಯಿಂದ ತೆಗಿದಿದ್ದು, ಇದು ಎಂತಹ ಅನ್ಯಾಯ. ಅವರು ಕಾಂಗ್ರೆಸ್ ಪಕ್ಷದಲ್ಲಿ ಕಟ್ಟ ಕಾರ್ಯಕರ್ತರಾಗಿ ಹಗಲು-ಇರಳು ಶ್ರಮಿಸಿದ್ದಾರೆ. ಅಂತಹ ನಂಬಿಕಸ್ಥ ಪ್ರಾಮಾಣಿಕ ಕಾರ್ಯಕರ್ತರಿಗೆ ಹಾಗೂ ತಳವಾರ ಸಮಾಜಕ್ಕೆ ದೊಡ್ಡ ಅಪಮಾನ ಮತ್ತು ಅನ್ಯಾಯವಾಗಿದೆ ಎಂದು ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಜಿಲ್ಲೆಯಲ್ಲಿ ನಮ್ಮ ಸಮಾಜದ ದೊಡ್ಡ ಪ್ರಮಾಣದಲ್ಲಿದ್ದರೂ ಇಂತಹ ಕೆಟ್ಟ ಪರಿಸ್ಥಿತಿ ಅನುಭವಿಸುವ ಗಂಭೀರ ಪರಿಸ್ಥಿತಿ ಬಂದೂದೊದಗಿದೆ. ಇದನ್ನು ತಳವಾರ ಸಮಾಜ ಅರ್ಥ ಮಾಡಿಕೊಳ್ಳಬೇಕು. ಇನ್ನೂ ಇಡೀ ರಾಜ್ಯದಲ್ಲಿರುವ 10 ಲಕ್ಷಕ್ಕಿಂತ ಹೆಚ್ಚಿರುವ ಈ ತಳವಾರ ಸಮುದಾಯಕ್ಕೆ ಕಾಂಗ್ರೆಸ್ ಪಕ್ಷದಲ್ಲಿ ಯಾವುದೇ ಒಂದು ಗೌರವದ ಸ್ಥಾನ ಸಿಗದೆ ಇರುವುದು ವಿಷಾಧನೀಯ, ಅದರಲ್ಲೂ ಬೆಳಗಾವಿ, ಬಾಗಲಕೋಟ, ಧಾರವಾಡ, ಹಾಗೂ ವಿಜಯಪುರ ಸೇರಿದಂತೆ ಉತ್ತರ ಕರ್ನಾಟಕದಲ್ಲಿ ಈ ಸಮುದಾಯದ ಓರ್ವರಿಗೂ ಸೂಕ್ತವಾದ ಶ್ರೇಣಿಯ ಹುದ್ದೆ ನೀಡದೆ ಇರುವುದು ಪಕ್ಷದ ಹಿರಿಯ ಮುಖಂಡರ ಮೇಲೆ ತಳವಾರ ಸಮುದಾಯವು ತೀವ್ರವಾಗಿ ಖಂಡಿಸುತ್ತೆವೆ. ಈ ಸಮುದಾಯಕ್ಕೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಸಣ್ಣಪ್ಪ ತಳವಾರ ಅವರನ್ನು ಮತ್ತೆ ಜಿಲ್ಲಾಧ್ಯಕ್ಷ ಹುದ್ದೆ ನೀಡಿ ಮತ್ತು ಈ ತಳವಾರ ಸಮುದಾಯದ ನಾಯಕರಿಗೆ ಪಕ್ಷದಲ್ಲಿ ರಾಜ್ಯ ಮಟ್ಟದ ಹುದ್ದೆ ನೀಡಬೇಕೆಂದು ಆಗ್ರಹಿಸಿದರು.

ಇನ್ನೂ ತಳವಾರ ಸಮಾಜ ಮುಖ್ಯ ಭೂಮಿಕೆಯಲ್ಲಿ ಬರ ಬೇಕಾದರೆ ಶಿಕ್ಷಣ ಹಾಗೂ ಸಂಘಟನೆಯ ಅತೀ ಮುಖ್ಯ. ಅದಕ್ಕೆ ಶಿಕ್ಷಣಕ್ಕೆ ಮೊಟ್ಟ ಮೊದಲ ಆದ್ಯತೆ ನೀಡಿ ಎಂದು ಹೇಳಿದರು.

ಆ ಒಂದು ಕಾರಣಕ್ಕೆ ಜಿಲ್ಲೆ, ತಾಲ್ಲೂಕು ಸೇರಿದಂತೆ ಗ್ರಾಮ ಮಟ್ಟದಲ್ಲಿ ಸಂಘಟನೆ ಮಾಡುವುದು ಅತ್ಯಂತ ಅವಶ್ಯಕ. ಹಾಗಾಗಿ ಎಲ್ಲರೂ ಕೈ ಜೋಡಿಸಿ ಸಮುದಾಯದ ಶಕ್ತಿ ತೋರಿಸೋಣ ಎಂದು ಹೇಳಿದರು.

ಜಿಲ್ಲಾ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಶಿವಪ್ಪ. ಭೀಮಪ್ಪ.ಹರಿಜನ.ಇಂಡಿ.ವಿಜಯಪುರ

ಅಮಿತ್ ಶಾ ಅವರನ್ನು ಕೂಡಲೇ ಸಚಿವ ಸಂಪುಟದಿಂದ ವಜಾಗೊಳಿಸಲು ಆಗ್ರಹಿಸಿ ಡಿ.ಎಸ್.ಎಸ್.ದಿಂದ ಅರೆಬೆತ್ತಲೆ ಮೆರವಣಿಗೆ

ಸಿಹಿ ಕಹಿ ಸುದ್ದಿ

ಬಸವನ ಬಾಗೇವಾಡಿ : ಬಸವನ ಬಾಗೇವಾಡಿ ಪಟ್ಟಣದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಒಕ್ಕೂಟ ತಾಲೂಕ ಶಾಖೆ ಬಸವನ ಬಾಗೇವಾಡಿ ವತಿಯಿಂದ ಕೇಂದ್ರ ಸಚಿವ ಅಮಿತ್ ಶಾ ಅವರನ್ನು ಕೂಡಲೇ ಸಚಿವ ಸಂಪುಟದಿಂದ ವಜಾ ಮಾಡಬೇಕೆಂದು ಆಗ್ರಹಿಸಿ ಹೋರಾಟ ನಡೆಸಿದರು.

ಹೋರಾಟವು ಬಸವನ ಬಾಗೇವಾಡಿಯ ಅಂಬೇಡ್ಕರ್ ವೃತ್ತದ ಅಂಬೇಡ್ಕರ್ ಮೂರ್ತಿಗೆ ಮಾಲಾರ್ಪಣೆ ಮಾಡುವ ಮೂಲಕ ಅರಬೆತ್ತಲೆ ಮೆರವಣಿಗೆ ಪ್ರಾರಂಭವಾಗಿ ಬಸವೇಶ್ವರ ವೃತ್ತದ ವರೆಗೂ ಸಾಗಿತು.

ಬಸವೇಶ್ವರ ವೃತ್ತದಲ್ಲಿ ಶ್ರೀ ಅಮಿತ್ ಶಾ ಅವರ ಪ್ರತಿ ಕೃತಿ ದಹಿಸಿದರು. ಅಮಿತ್ ಶಾ ಅವರು ಅಂಬೇಡ್ಕರ್ ಅವರಿಗೆ ಅವಹೇಳನ ಕಾರಿಯಾಗಿ ಮಾತನಾಡಿರುವ ಇವರನ್ನು ಸಚಿವ ಸಂಪುಟದಿಂದ ವಜಾ ಮಾಡಬೇಕೆಂದು ಆಗ್ರಹಿಸಿ ತಹಶೀಲ್ದಾರ್ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದರು. ಇದೇ ಸಮಯದಲ್ಲಿ ಶ್ರೀ ಸತ್ಯಜಿತ್ ಶಿವಾನಂದ ಪಾಟೀಲ್ ಉಪಸ್ಥಿತರಿದ್ದರು. ಹೋರಾಟದಲ್ಲಿ ದಲಿತ ಮುಖಂಡರಾದ ಶ್ರೀ ಅಶೋಕ್ ಚಲವಾದಿ. ಅರವಿಂದ ಸಾಲವಾಡಗಿ. ಪರಶುರಾಮ್ ದಿಂಡವಾರ್. ಮಹಾಂತೇಶ್ ಸಾಸಾಬಾಳ ಗುರುರಾಜ್ ಗುಡಿಮನಿ ಸಂಜೀವ್ ಕಲ್ಯಾಣಿ ಮುಂತಾದ ದಲಿತ ನಾಯಕರು ಸಂಘಟನೆಯ ಕಾರ್ಯಕರ್ತರು ಭಾಗವಹಿಸಿದ್ದರು.

ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಮೈಬೂಬಬಾಷ ಮನಗೂಳಿ.ತಾಳಿಕೋಟೆ

ರೋಣದಲ್ಲಿ ಬಸ್ ಪ್ರಯಾಣ ದರ ಹೆಚ್ಚಳಕ್ಕೆ ಆಕ್ರೋಶ: ಎ.ಬಿ.ವಿ.ಪಿ ಯಿಂದ ಪ್ರತಿಭಟನೆ

ರೋಣ : ರಾಜ್ಯದಲ್ಲಿ ಸಾರಿಗೆ ಬಸ್ ಪ್ರಯಾಣ ದರ ಶೇ 15. ರಷ್ಟು ಹೆಚ್ಚಳ ಮಾಡಿದ್ದರಿಂದ ಜನ ಸಾಮಾನ್ಯರಿಗೆ ತೀವ್ರ ಹೊರೆ ಯಾಗಲಿದ್ದು, ರಾಜ್ಯ ಸರ್ಕಾರದ ಈ ಕ್ರಮ ತೀವ್ರವಾಗಿ ಖಂಡನೀಯ ಎಂದು ರೋಣ ತಾಲೂಕು ಎ.ಬಿ.ವಿ.ಪಿ ಘಟಕದ ಪದಾಧಿಕಾರಿಗಳು ಆಕ್ರೋಶ ವ್ಯಕ್ತಪಡಿಸಿದ್ದು, ಪಟ್ಟಣದಲ್ಲಿ ಸೋಮವಾರ ಪ್ರತಿಭಟನೆ ನಡೆಸಿದರು.

ಈ ವೇಳೆ ಎಬಿವಿಪಿ ಶಹರ ಘಟಕ ಕಾರ್ಯದರ್ಶಿ ಸಚಿನ್ ಕುಂದರಗಿ ಮಾತನಾಡಿ, ರಾಜ್ಯ ಸರ್ಕಾರ ಸಾರಿಗೆ ಬಸ್ ಪ್ರಯಾಣ ದರ ಹೆಚ್ಚಳ ಮಾಡಿದ್ದು ಖಂಡನೀಯ, ಬಡವರು, ರೈತರು, ಮಧ್ಯಮ ವರ್ಗದ ಜನರು ಸಾರಿಗೆ ಬಸ್ ಪ್ರಯಾಣವನ್ನೇ ಅವಲಂಬಿಸಿದ್ದಾರೆ. ಬರಗಾಲ, ಅತಿವೃಷ್ಟಿ, ಅಗತ್ಯ ಬೆಲೆ ಏರಿಕೆಯಿಂದ ಮೊದಲೇ ಕಂಗಾಲಾದ ಜನರಿಗೆ ಮತ್ತಷ್ಟು ಪೆಟ್ಟು ನೀಡಿದಂತಾಗಿದೆ. ಒಂದೆಡೆ ಗ್ಯಾರಂಟಿ ಯೋಜನೆಗಳನ್ನು ಉಚಿತವಾಗಿ ನೀಡಿ ಮತ್ತೊಂದು ಮಾರ್ಗದಿಂದ ಜನರಿಗೆ ಸಂಕಷ್ಟ ತಂದೊಡ್ಡುವುದು ಎಷ್ಟರ

ಮಟ್ಟಿಗೆ ಸರಿ.....? ಸಾರಿಗೆ ಬಸ್ ಪ್ರಯಾಣ ದರ ಏರಿಕೆ ಮಾಡಿದ್ದು ಸೂಕ್ತವಲ್ಲ. ಕೂಡಲೇ ದರ ಹೆಚ್ಚಳದಿಂದ ರಾಜ್ಯ ಸರ್ಕಾರ ಹಿಂದೆ ಸರಿಯಬೇಕು. ಜನರಿಗೆ ಮೂಲ ಸೌಲಭ್ಯ ಸಮರ್ಪಕವಾಗಿ ಒದಗಿಸಬೇಕು ಎಂದು ಆಗ್ರಹಿಸಿದರು.

ಎ.ಬಿ.ವಿ.ಪಿ ತಾಲೂಕು ಸಂಚಾಲಕ ವಿರೇಶ್ ಉಳ್ಳಾಗಡ್ಡಿ ಮಾತನಾಡಿ, ಸಾರಿಗೆ ಬಸ್ ಪ್ರಯಾಣ ದರ ಏರಿಕೆ ಮಾಡಿದ್ದ ಕ್ರಮ ಸಮಂಜಸವಲ್ಲ. ಇದರಿಂದ ನಿತ್ಯ ಬೇರೆಡೆ ದುಡಿಯಲು ತೆರಳುವ ಶ್ರಮಿಕರಿಗೆ ತೊಂದರೆ ಯಾಗಲಿದೆ. ಸರ್ಕಾರಿ ಬಸ್ ಪ್ರಯಾಣವನ್ನೇ ಅವಲಂಬಿಸಿರುವ ಜನರ ಮೇಲೆ ಆರ್ಥಿಕ ಹೊರೆಯನ್ನುಂಟು ಮಾಡಿದಂತಾಗಿದೆ ಎಂದು ಹೇಳಿದರು.

ಪಟ್ಟಣದ ಮುಲ್ಲನಬಾವಿ ವೃತ್ತ, ಪೋತದಾರ ರಾಜನ ಕಟ್ಟೆ ಬಳಿ ಮಾನವ ಸರಪಳಿ ನಿರ್ಮಿಸಿ, ಸರ್ಕಾರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ,ಉಪತಹಸೀಲ್ದಾರ್‌ಜೆ.ಟಿಕೊಪರಅವರಮೂಲಕ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ ತಾಲೂಕು ಎಸ್.ಎಫ್.ಡಿ ಪ್ರಮುಖ ವಿಶ್ವನಾಥ್ ಕುರಿ, ನಗರ ಸಹ ಕಾರ್ಯದರ್ಶಿ ಶಿವಕುಮಾರ ಬಣಪನವರ, ತಾಲೂಕು ಕಾರ್ಯಕರ್ತ ಹರ್ಷ ಕಟ್ಟಿ, ಶರಣಪ್ಪ ಮುದಿಗೌಡರ ಹಾಗೂ ಪಟ್ಟಣದ ವಿವಿಧ ಕಾಲೇಜು ವಿದ್ಯಾರ್ಥಿಗಳು ಎಬಿವಿಪಿ ಪದಾಧಿಕಾರಿಗಳು ಭಾಗವಹಿಸಿದ್ದರು.

ಜಿಲ್ಲಾ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಎಸ್.ವಿ ಸಂಕನಗೌಡ್ರ. ರೋಣ ಗದಗ

ಭಾವೈಕ್ಯತೆ ಬೆಸೆದ ಬುತ್ತಿ ಜಾತ್ರೆ

ರಬಕವಿ-ಬನಹಟ್ಟಿ : ಬನಹಟ್ಟಿಯ ಗುಡ್ಡದ ಲಕ್ಷ್ಮಿ ದೇವಿ ಜಾತ್ರಾ ಮಹೋತ್ಸವದ ಅಂಗವಾಗಿ ಕಳಸೋತ್ಸವದ ದಿನವಾದ ಬುಧವಾರ ಭಾವೈಕ್ಯತೆ ಬೆಸೆಯುವ ಬುತ್ತಿ ಜಾತ್ರೆಯಲ್ಲಿ ಹಲವು ಮನಸುಗಳ ಸಂಗಮವಾಯಿತು.

ಬಡವ, ಶ್ರೀಮಂತ, ಮೇಲು-ಕೀಳ ಜಾತಿಯೆಂಬ ಅಂತರವಿಲ್ಲದೇ ಎಲ್ಲರೂ ಒಂದೆಡೆ ಬುತ್ತಿ ಹಂಚಿ ಸವಿದರು. ಪ್ರತಿ ವರ್ಷ ಲಕ್ಷ್ಮೀ ಜಾತ್ರೆಯ ಮಾರನೇ ದಿನ ಕಳಸೋತ್ಸವದಂದು ಜರುಗುವ ಜಾತ್ರೆಯಲ್ಲಿ ಸುತ್ತಲಿನ ಗ್ರಾಮಗಳ ಹಾಗು ತೋಟದ ರೈತರು ರೊಟ್ಟಿ, ತರಹೇವಾರಿ ಪಲ್ಯೆ, ಹಿಂಡಿ, ಚಟ್ನಿ, ಮೊಸರು, ಕಡಲೆ, ಗುರೆಳ್ಳು ತಂದು ಸಹಭೋಜನ ಮಾಡುತ್ತಾರೆ.

ಹಂಚಿಕೊಂಡು ಭೋಜನ ಸವಿಯುವದು: ಬುತ್ತಿ ಜಾತ್ರೆಯಲ್ಲಿ ಪರಸ್ಪರ ಹಂಚಿಕೊಂಡು ಭೋಜನ ಸವಿದರೆ, ಸಾವಿರಾರು ಭಕ್ತರಿಗಾಗಿ ಹೆಚ್ಚಿನ ಅಡುಗೆ ತಯಾರಿಸಿಕೊಂಡು ನೂರಾರು ರೈತ ಮಹಿಳೆಯರು ಬೆಳಗ್ಗಿನಿಂದಲೇ ತಲೆ ಮೇಲೆ ಬೃಹದಾಕಾರದ ಬುತ್ತಿ ಹೊತ್ತುಕೊಂಡು ಬರುವದು ಸಾಮಾನ್ಯ. ಈ ಜಾತ್ರೆಗೆ ಬಂದವರು ಯಾರೂ ಹಾಗೆಯೇ ಹೋಗುವದಿಲ್ಲ. ಇಲ್ಲಿ ಊಟ ಮಾಡಿಯೇ ಹೋಗುತ್ತಾರೆ. ದೇವಸ್ಥಾನ ಸಮಿತಿಯಿಂದ ಕೊರತೆಯಾಗಬಾರದೆಂದು ಸಜ್ಜಕ, ಅನ್ನ-ಸಾಂಬಾರು ಮಾಡಿಸಲಾಗಿರುತ್ತದೆ.

ಈ ಸಂದರ್ಭದಲ್ಲಿ ರಾಜುಗೌಡ ಪಾಟೀಲ, ಶ್ರೀಶೈಲ ದಭಾಡಿ, ಮಲ್ಲಿಕಾರ್ಜುನ ತುಂಗಳ, ದಾನಪ್ಪ ಹುಲಜತ್ತಿ, ಮಲ್ಲಣ್ಣ ಬಾವಲತ್ತಿ, ಪ್ರಶಾಂತ ಕೊಳಕಿ, ಮಲ್ಲಣ್ಣ ಕಕಮರಿ, ರಾಜು ಗುಂಡಿ, ರಮೇಶ ಮಹಿಷವಾಡಗಿ, ನಂದು ಕುಳ್ಳಿ, ಸುನೀಲ ಗುಂಡಿ, ಶ್ರೀಶೈಲಪ್ಪ ಉಳ್ಳಾಗಡ್ಡಿ, ಬಸಲಿಂಗ ಗುಂಡಿ, ಕಾಡಪ್ಪ ಪೂಜಾರಿ, ಮಲ್ಲಪ್ಪ ಬಾಳಿಗಿಡದ, ಮಹಾದೇವ ಮಡ್ಡಿ, ಶ್ರೀಶೈಲ ಆಸಂಗಿ, ಮಾಳು ಹಿಪ್ಪರಗಿ, ಲಕ್ಷ್ಮಣ ಮಹಿಷವಾಡಗಿ, ಪರಪ್ಪ ಧಡೂತಿ, ಲಕ್ಷ್ಮಣ ಗುಂಡಿ, ದೇವಕಿಶನ ರಾಠಿ, ಕಾಡಪ್ಪ ಬಾಬಾನಗರ, ಕಾಡಪ್ಪ ಪಾಟೀಲ ಸೇರಿದಂತೆ ಇನ್ನೂ ಅನೇಕ ಹಿರಿಯರು ಭಾಗವಹಿಸಿದ್ದರು.

ಕರಾಟೆ-ರಾಷ್ಟ್ರ ಮಟ್ಟದ ಚಾಂಪಿಯನ್ನಾಗಿ ಹೊರಹೊಮ್ಮಿದ ಲೋಹಿತ ಶಿಂಧೆ

ರಬಕವಿ-ಬನಹಟ್ಟಿ : ಇತ್ತೀಚೆಗೆ ಹುಬ್ಬಳ್ಳಿಯ ಆಸ್ಪೈರ್ ಸ್ಪೋರ್ಟ್ಸ್ ಕರಾಟೆ ಅಕಾಡೆಮಿಯಿಂದ ಜರುಗಿದ ರಾಷ್ಟ್ರ ಮಟ್ಟದ ಕರಾಟೆ ಚಾಂಪಿಯನ್ಶಿಪ್ ಪಂದ್ಯಾವಳಿಯಲ್ಲಿ ಎಂಟು ರಾಜ್ಯಗಳ ಸಾವಿರಕ್ಕೂ ಅಧಿಕ ಕುಸ್ತಿ ಪಟುಗಳು ಭಾಗವಹಿಸಿದ್ದರು.

ತಾಲೂಕಿನ ಬನಹಟ್ಟಿಯ ವಿದ್ಯಾರ್ಥಿ ಲೋಹಿತ ಶಿಂಧೆ ಕಟಾ ವಿಭಾಗದಿಂದ ಪ್ರಥಮ ಸ್ಥಾನದೊಂದಿಗೆ ಚಿನ್ನದ ಪದಕ ತನ್ನದಾಗಿಸಿ ಕೊಂಡಿದ್ದಾನೆ. ಅದರಂತೆ ಶ್ರೇಯಸ್ ಪಾಗಡೆ ದ್ವಿತೀಯ (ಬೆಳ್ಳಿ ಪದಕ), ಅಭಿಲಾಷ ಕೊಣ್ಣೂರ ತೃತಿಯ (ಕಂಚು) ಹೀಗೆ ಮೂವರೂ ರಬಕವಿ-ಬನಹಟ್ಟಿಯವರೆ ಆಗಿದ್ದು ವಿಶೇಷ.

ರಬಕವಿ-ಬನಹಟ್ಟಿ ತಾಲೂಕಿನಿಂದ ತೆರಳಿದ ಕುಸ್ತಿಪಟುಗಳು ಒಟ್ಟಾರೆ ಒಂದು ಚಿನ್ನ, ಮೂರು ಬೆಳ್ಳಿ ಹಾಗು ನಾಲ್ಕು ಕಂಚಿನ ಪದಕ ಪಡೆಯುವುದರ ಮೂಲಕ ವಿಶೇಷ ಸಾಧನೆ ಮೆರೆದಿದ್ದಾರೆ.

ವಾಸ್ತು ಶಿಲ್ಪದ ಹರಿಕಾರ ಜಕಣಾಚಾರಿ

ರಬಕವಿ-ಬನಹಟ್ಟಿ : ಅಮರಶಿಲ್ಪಿ ಜಕಣಾಚಾರಿ ವಾಸ್ತು ಶಿಲ್ಪದ ಹರಿಕಾರರು. ಅವರು ನಿರ್ಮಾಣ ಮಾಡಿದ ವಾಸ್ತು ಶಿಲ್ಪದ ದೇವಸ್ಥಾನಗಳು ಇಂದಿಗೂ ವಿಶ್ವ ಶ್ರೇಷ್ಠವಾಗಿವೆ. ಮಹಾತ್ವರ ಜಯಂತ್ಯೋತ್ಸವಗಳಂದು ಅವರನ್ನು ಮತ್ತು ಅವರು ಮಾಡಿದ ಮಹತ್ತರ ಕಾರ್ಯಗಳನ್ನು ಸ್ಮರಿಸುವಂತಾಗಬೇಕು. ಮಹಾತ್ಮರ ಸಾಧನೆಗಳನ್ನು ಮಕ್ಕಳಿಗೆ ತಿಳಿಸಬೇಕು ಎಂದು ರಬಕವಿ ಬನಹಟ್ಟಿ ತಹಶೀಲ್ದಾರ್ ಗಿರೀಶ ಸ್ವಾದಿ ತಿಳಿಸಿದರು.

ಅವರು ಬುಧವಾರ ತಹಶೀಲ್ದಾರ್ ಕಾರ್ಯಾಲಯದಲ್ಲಿ ಅಮರಶಿಲ್ಪಿ ಜಕಣಾಚಾರಿ ಜಯಂತ್ಯೋತ್ಸವದ ಸಂದರ್ಭದಲ್ಲಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ಬನಹಟ್ಟಿಯ ವಿಶ್ವಕರ್ಮ ಸಮಾಜದ ಅಧ್ಯಕ್ಷ ಮೌನೇಶ ಬಡಿಗೇರ ಮಾತನಾಡಿ, ವಿಶ್ವಕರ್ಮ ಸಮಾಜಕ್ಕೆ ಸಮುದಾಯ ಭವನದ ಅವಶ್ಯಕತೆ ಇದ್ದು, ಈ ನಿಟ್ಟಿನಲ್ಲಿ ತಾಲ್ಲೂಕು ಆಡಳಿತ ಸಮುದಾಯ ಭವನದ ಕುರಿತು ಸೂಕ್ತ ಕ್ರಮ ತೆಗೆದುಕೊಂಡು ಭವನ ನಿರ್ಮಾಣ ಮಾಡಲು ಅನುಕೂಲ ಮಾಡಿಕೊಡಬೇಕು. ಜಕಣಾಚಾರ್ಯರು ವಿಶ್ವ ಕಂಡ ಶ್ರೇಷ್ಠ ವಾಸ್ತುಶಿಲ್ಪಿಯಾಗಿದ್ದರು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಉಪ ತಹಶೀಲ್ದಾರ್ ಆರ್. ಎಸ್. ಸಾತಿಹಾಳ, ಗ್ರಾಮ ಲೆಕ್ಕಾಧಿಕಾರಿ ಸದಾಶಿವ ಕುಂಬಾರ, ಸಮಾಜದ ಮುಖಂಡರಾದ ಗಣಪತಿ ಸುತಾರ, ಅಶೋಕ ಪತ್ತಾರ, ಚಿದಾನಂದ ಪತ್ತಾರ, ಅಚ್ಯುತ ಪತ್ತಾರ, ಮಂಜುನಾಥ ಪತ್ತಾರ, ವಿಷ್ಣು ಬಡಿಗೇರ, ಈರಪ್ಪ ಬಡಿಗೇರ ಸೇರಿದಂತೆ ವಿಶ್ವಕರ್ಮ ಸಮಾಜದ ಇನ್ನೂ ಅನೇಕ ಮುಖಂಡರು ಉಪಸ್ಥಿತರಿದ್ದರು.

ಫೆಡೆರೇಷನ್ ಕಪ್ ಕರಾಟೆ ಚಾಂಪಿಯನ್‌ಶೀಪ್‌ನಲ್ಲಿ "ಸೆಕೆಂಡ್ ರನ್ನರ್ ಅಪ್" ಪ್ರಶಸ್ತಿ ಬಾಚಿಕೊಂಡ ಕರ್ನಾಟಕ

ಕಾಶಿಯಲ್ಲಿ ಕರ್ನಾಟಕಕ್ಕೆ ಪದಕಗಳ ರಾಶಿ

ಬಾಗಲಕೋಟ: ಡಿಸೆಂಬರ್ 28 ಮತ್ತು29ರಂದು ಉತ್ತರಪ್ರದೇಶದ ವಾರಣಾಸಿಯಬನಾರಸ್‌ಹಿಂದೂ ಯುನಿರ್ವಸಿಟಿ ಇಂಡೋರ್ ಸ್ಟೇಡಿಯಂನಲ್ಲಿ ನಡೆದ 22ನೇ ಆಲ್ ಇಂಡಿಯಾ ಇಂಟರ್ ಸ್ಕೂಲ್ & ಸಿನಿಯರ್ ಕರಾಟೆ ಚಾಂಪಿಯನ್‌ಶೀಪ್ ಫೆಡೆರೇಷನ್ ಕಪ್ ಪಂದ್ಯಾವಳಿಯಲ್ಲಿ ಕರ್ನಾಟಕದಿಂದ 18 ವಿದ್ಯಾರ್ಥಿಗಳು ಭಾಗವಹಿಸಿ ಪದಕಗಳ ರಾಶಿಯನ್ನೇ ಬೇಟೆಯನ್ನಾಡಿದ್ದಾರೆ. ದೆಹಲಿ, ಪಶ್ಚಿಮ ಬಂಗಾಳ, ಹರ್ಯಾಣ, ಆಸ್ಸಾಂ, ಮಣಿಪುರ, ಜಾರ್ಖಂಡ್ ಬಿಹಾರ, ತಮಿಳುನಾಡು, ಪಂಜಾಬ್ ಸೇರಿದಂತೆ 17 ರಾಜ್ಯಗಳಿಂದ ಸುಮಾರು 2500 ಕ್ಕೂ ಹೆಚ್ಚು ಕರಾಟೆ ಪಟುಗಳ ಪಾಲ್ಗೊಂಡಿದ್ದು,

ನಮ್ಮ ರಾಜ್ಯದ ಕರಾಟೆ ಪಟುಗಳು ಕಟಾ ಮತ್ತು ಕುಮಿಟೆ ವಿಭಾಗಗಳಲ್ಲಿ ಸ್ಪರ್ಧಿಸಿ 8 ಚಿನ್ನದ ಪದಕ, 12 ಬೆಳ್ಳಿ ಪದಕ ಹಾಗೂ 09 ಕಂಚು ಒಟ್ಟು 29 ಪದಕಗಳನ್ನು ಬಾಚಿಕೊಳ್ಳುವ ಮೂಲಕ ಚಾಂಪಿಯನ್‌ಶೀಪ್‌ನಲ್ಲಿ "ಸೆಕೆಂಡ್ ರನ್ನರ್ ಅಪ್" ಪ್ರಶಸ್ತಿಯನ್ನು ಕರ್ನಾಟಕ ತಂಡ ಪಡೆದುಕೊಂಡಿದೆ. ಕರ್ನಾಟಕದ ವಿದ್ಯಾರ್ಥಿಗಳ ಸಾಧನೆಗೆ ಭಾರತದ ಡಬ್ಲ್ಯುಕೆಎಫ್ ಮುಖ್ಯ ರೇಫ್ರೀ ಹಾನ್ಸಿ ಪ್ರೇಮಜಿತ್ ಸೇನ್, ನಾರ್ತ್ ಇಂಡಿಯಾ ಕರಾಟೆ ಅಸೋಸಿಯೇಷನ್ ಅಧ್ಯಕ್ಷ ಹಾನ್ಸಿ ರಜನಿಶ್ ಚೌಧರಿ, ಬಾಗಲಕೋಟೆ ಶಾಸಕ ಎಚ್. ವೈ ಮೇಟಿ, ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿಪಂ ಸಿಇಓ ಶಶಿಧರ ಕುರೇರ, ಅಪರ ಜಿಲ್ಲಾಧಿಕಾರಿ ಪರಶುರಾಮ

2017 ರಿಂದ 2023 ಅವಧಿಯ ಅಭಿವೃದ್ಧಿ ಹಾಗೂ ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗಳು ಪ್ರಕಟ

ಬೆಂಗಳೂರು: ಕರ್ನಾಟಕ ಸರ್ಕಾರವು ಅಭಿವೃದ್ಧಿ ಮತ್ತು ಪರಿಸರ ಪತ್ರಿಕೋದ್ಯಮ ಕ್ಷೇತ್ರಗಳಲ್ಲಿ ವಿಶಿಷ್ಟ ಸಾಧನೆ ಮಾಡಿದ ಪತ್ರಕರ್ತರಿಗೆ ನೀಡುವ 2017 ರಿಂದ 2023ರ ಕ್ಯಾಲೆಂಡರ್ ವರ್ಷಗಳ ಅಭಿವೃದ್ಧಿ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗಳನ್ನು ಪ್ರಕಟಿಸಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ಎಂ ನಿಂಬಾಳ್ಕರ್ ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಈ ಪ್ರಶಸ್ತಿಗಳನ್ನು ಸರ್ಕಾರವು 2001ನೇ ಸಾಲಿನಿಂದ ಸ್ಥಾಪಿಸಿದ್ದು 2016 ರವರೆಗೆ ನಾಡಿನ 32 ಜನ ಹಿರಿಯ ಪತ್ರಕರ್ತರು ಈ ಎರಡೂ ಪ್ರಶಸ್ತಿಗಳನ್ನು ಸ್ವೀಕರಿಸಿದ್ದಾರೆ. ಕೋವಿಡ್ ಹಾಗೂ ಇತರೆ ಕಾರಣಗಳಿಂದ ವಿಳಂಬವಾಗಿದ್ದ 2017ರಿಂದ 2023ರ ವರೆಗಿನ ಏಳು ವರ್ಷಗಳ ಅವಧಿಯ ಪ್ರಶಸ್ತಿಗಳಿಗೆ ಅರ್ಹ ಪತ್ರಕರ್ತರನ್ನು ಹಿರಿಯ ಪತ್ರಕರ್ತರಾದ ಸನತ್ ಕುಮಾರ್ ಬೆಳಗಲಿ ಹಾಗೂ ಕೆ.ಶಿವಕುಮಾರ್ ಅವರಿದ್ದ ಸಮಿತಿಯು ಆಯ್ಕೆ ಮಾಡಿದೆ. ಪ್ರಶಸ್ತಿಯು ತಲಾ ಒಂದು ಲಕ್ಷ ರೂಪಾಯಿ ನಗದು, ಸ್ಮರಣಿಕೆ, ಅಭಿನಂದನಾ ಪತ್ರ ಒಳಗೊಂಡಿರುತ್ತದೆ.

2017ರಿಂದ 2023ರವರೆಗಿನ ಪರಿಸರ ಪತ್ರಿಕೋದ್ಯಮ ಪ್ರಶಸ್ತಿ ಪುರಸ್ಕೃತರ ವಿವರ:

ವಿಜಯಲಕ್ಷ್ಮಿ ಶಿಬರೂರು (2017) : ಮೂಲತ: ದಕ್ಷಿಣ ಕನ್ನಡ ಜಿಲ್ಲೆಯ ಶಿಬರೂರು ಗ್ರಾಮದವರಾದ ವಿಜಯಲಕ್ಷ್ಮಿ ಅವರು, ಕಳೆದ ಸುಮಾರು 25 ವರ್ಷಗಳಿಂದ ನಾಡಿನ ವಿವಿಧ ಮಾಧ್ಯಮಗಳಿಗೆ ಸೇವೆ ಸಲ್ಲಿಸುತ್ತಿದ್ದಾರೆ. ಅರಣ್ಯ ಸಂರಕ್ಷಣೆ, ಅಪಾಯಕಾರಿ ಆಹಾರ ಪದಾರ್ಥಗಳು,ಪ್ಲಾಸ್ಟಿಕ್‌ಅಪಾಯಗಳುಮತ್ತಿತರ ಜಾಗೃತಿಮೂಡಿಸುವವರದಿಗಳನ್ನುಎಲೆಕ್ಟ್ರಾನಿಕ್ ಹಾಗೂ ಸಾಮಾಜಿಕ ಮಾಧ್ಯಮಗಳ ಮೂಲಕ ಪರಿಣಾಮಕಾರಿಯಾಗಿ ಬಿತ್ತರಿಸಿದ್ದಾರೆ. ಪರಿಸರ ಜಾಗೃತಿಯ ವರದಿಗಳನ್ನು ಪ್ರಕಟಿಸಿದ್ದಾರೆ.

ಬಿ.ಎಂ.ಟಿ ರಾಜೀವ್ : (2018): ಮೂಲತ: ತುಮಕೂರು ಜಿಲ್ಲೆಯ ಕುಣಿಗಲ್ ತಾಲ್ಲೂಕಿನ ಬೆನವಾರ ಗ್ರಾಮದವರು, ಉಪ ಅರಣ್ಯ ಸಂರಕ್ಷಣಾಧಿಕಾರಿಯಾಗಿ ಭಾರತೀಯ ಅರಣ್ಯ ಸೇವೆಯಿಂದ 2006ರಲ್ಲಿ ನಿವೃತ್ತಿ ಹೊಂದಿದ್ದಾರೆ. 1985 ರಿಂದ ವನ್ಯಜೀವಿಗಳು, ಅರಣ್ಯ ಮತ್ತು ಪರಿಸರ ಸಂರಕ್ಷಣೆ ಕುರಿತು ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಲೇಖನ, ಪ್ರಬಂಧಗಳನ್ನು ಬರೆಯುತ್ತಿದ್ದಾರೆ. ಅರಣ್ಯ/ವನ್ಯಜೀವಿ/ಪರಿಸರದಿಂದ ಮನುಕುಲಕ್ಕಿರುವ ಅನುಕೂಲಗಳು, ಅವಶ್ಯಕತೆಗಳ ಬಗ್ಗೆ ಲೇಖನಗಳನ್ನು ಬರೆದಿದ್ದಾರೆ. ಭಾರತೀಯ ವನ್ಯಪ್ರಾಣಿಗಳ ಕೈಪಿಡಿ, ಪರಿಸರ ಮಾಲಿನ್ಯ ಮತ್ತು ವಾಯುಗುಣ ಬದಲಾವಣೆ ಕುರಿತು ಒಟ್ಟು 6 ಪುಸ್ತಕಗಳನ್ನು ಪ್ರಕಟಿಸಿದ್ದಾರೆ.

ವಿನೋದಕುಮಾರ್ ಬಿ. ನಾಯ್ಕ: (2019) : ಮೂಲತ: ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲ್ಲೂಕಿನ ಗುಬ್ಬಿಹಳ್ಳಿ ಗ್ರಾಮದವರು. ಏಷಿಯಾನೆಟ್ ಸುವರ್ಣ ನ್ಯೂಸ್ ಸಂಸ್ಥೆಯಲ್ಲಿ ವಿಶೇಷ ಯೋಜನೆಗಳ ವಿಭಾಗದ ಸಂಪಾದಕರಾಗಿರುವ ಇವರು ವಿವಿಧ ಮಾಧ್ಯಮಗಳಲ್ಲಿ ಸುಮಾರು 23 ವರ್ಷಗಳ ಕಾಲ ವನ್ಯಜೀವಿ ಹಾಗೂ ಪರಿಸರ ಕುರಿತು ಅನೇಕ ಪರಿಣಾಮಕಾರಿ ವರದಿಗಳನ್ನು ಮಾಡಿದ್ದಾರೆ. ಕರ್ನಾಟಕರಾಜ್ಯವನ್ಯಜೀವಿಮಂಡಳಿಸದಸ್ಯರಾಗಿ ಸೇವೆ ಸಲ್ಲಿಸಿದ್ದಾರೆ. ಪ್ರಾದೇಶಿಕ ಮಾಧ್ಯಮಗಳಲ್ಲಿ ಮೊದಲ ಬಾರಿಗೆ ವನ್ಯಜೀವಿ ಸಂರಕ್ಷಣಾ ಅಭಿಯಾನಗಳನ್ನು ಹಮ್ಮಿಕೊಂಡು ಕಾಡಂಚಿನ ಗ್ರಾಮಗಳಲ್ಲಿ ಮಾನವ ?ವನ್ಯಜೀವಿ ಸಂಘರ್ಷ ಕಡಿಮೆ ಮಾಡುವ ನಿಟ್ಟಿನಲ್ಲಿ ಶ್ರಮಿಸುತ್ತಿದ್ದಾರೆ. 'ಜಂಗಲ್ ಡೈರಿ' ಕೃತಿ ಪ್ರಕಟಿಸಿದ್ದಾರೆ.

ಮಾಲತೇಶ ಅಂಗೂರ (2020): ಹಾವೇರಿ ಜಿಲ್ಲೆಯ ಮಾಲತೇಶ ಗದಿಗೆಪ್ಪ ಅಂಗೂರ ಅವರು ಸುಮಾರು 34 ವರ್ಷಗಳಿಂದ ಪತ್ರಿಕೋದ್ಯಮದಲ್ಲಿದ್ದಾರೆ ಕಳೆದ 18ವರ್ಷಗಳಿಂದ ಕೌರವ ಕನ್ನಡ ದಿನಪತ್ರಿಕೆಯ ಮುಖ್ಯ ವರದಿಗಾರರಾಗಿ ಪರಿಸರಕ್ಕೆ ಸಂಬಂಧಿಸಿದಂತೆ ವನ್ಯಜೀವಿಗಳು, ಕೆರೆಕಟ್ಟೆಗಳು, ಪ್ರಾಣಿಪಕ್ಷಿಗಳು, ಕೀಟಗಳು,ಸಸ್ಯಗಳು,ನಿಸರ್ಗ,ಗುಡ್ಡಗಾಡ್ಗರಗಳು, ಅತಿವೃಷ್ಟಿಅನಾವೃಷ್ಟಿಸೇರಿದಂತೆ ವಿವಿಧ ಪರಿಸರ ಜಾಗೃತಿಯ ವರದಿಗಳನ್ನು ಪ್ರಕಟಿಸಿದ್ದಾರೆ. 'ಕಾಡು–ಮೇಡು' ಕೃತಿ ಪ್ರಕಟವಾಗಿದೆ.

ಸುಧೀರ್ ಶೆಟ್ಟಿ (2021): ಉಡುಪಿ ಜಿಲ್ಲೆಯ ಪಾದೆಬೆಟ್ಟುಗ್ರಾಮದವರಾದಇವರುಮುಂಬೈನಲ್ಲಿ ಫೋಟೋ ಜರ್ನಲಿಸಂ ಪದವಿ ಪಡೆದಿದ್ದಾರೆ. ಅರಣ್ಯ, ವನ್ಯಜೀವಿ, ನದಿ ಮತ್ತು ನೀರಿನ ಮೂಲಗಳ ಸಂರಕ್ಷಣೆ, ಬಂಡೀಪುರ ಅರಣ್ಯದ ಪ್ರಾಣಿಗಳ ಪ್ರಾಣ ರಕ್ಷಣೆ, ಬೆಂಗಳೂರಿನ ಕೆರೆಗಳ ನೀರು ತಮಿಳುನಾಡಿಗೆ ಹರಿದುಹೋಗಿ ಅಲ್ಲಿ ಸಂಸ್ಕರಣೆಗೊಂಡುಕೃಷಿಗೆಬಳಕೆಯಾಗುತ್ತಿರುವ ಬಗ್ಗೆ ಸೆರೆಹಿಡಿದ ಛಾಯಾಚಿತ್ರಗಳು ರಾಜ್ಯದಲ್ಲಿ ಚರ್ಚೆ ಉಂಟುಮಾಡಿದ್ದವು. ಗದಗ ಜಿಲ್ಲೆಯ ಕಪ್ಪತ್ತಗುಡ್ಡದ ಸಂರಕ್ಷಣೆ ಸಾಕ್ಷ್ಯಚಿತ್ರ ನಿರ್ಮಿಸಿದ್ದಾರೆ.ಕಪ್ಪತ್ತಗುಡ್ಡಸಂರಕ್ಷಣೆಗೆಗದುಗಿನ ಡಾ:ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳು ಹಾಗೂ ಎಸ್.ಆರ್.ಹಿರೇಮಠ ಅವರ ಹೋರಾಟದ ಸಂದರ್ಭದಲ್ಲಿ ಸಾಕ್ಷ್ಯಚಿತ್ರ ಪ್ರದರ್ಶಿಸಿದ್ದರು. ಮಹದಾಯಿ ತಿರುವು ಯೋಜನೆ, ಎತ್ತಿನಹೊಳೆ ಕುಡಿಯುವ ನೀರಿನ ಯೋಜನೆ, ಸಂಡೂರಿನ ಅಕ್ರಮ ಗಣಿಗಾರಿಕೆ ಮತ್ತಿತರ ವಿಷಯಗಳ ಕುರಿತು ಇವರ ಛಾಯಾಚಿತ್ರಗಳು ಪ್ರದರ್ಶನಗೊಂಡಿವೆ.

ಮಲ್ಲಿಕಾರ್ಜುನ ಹೊಸಪಾಳ್ಯ (2022) : ಮಲ್ಲಿಕಾರ್ಜುನ ಹೊಸಪಾಳ್ಯ ಅವರು ತುಮಕೂರು ಜಿಲ್ಲೆಯ ಮಧುಗಿರಿ ತಾಲ್ಲೂಕಿನ ಹೊಸಪಾಳ್ಯ ಗ್ರಾಮದವರು. ಪತ್ರಿಕೋದ್ಯಮ ಸ್ನಾತಕೋತ್ತರ ಪದವಿಯಲ್ಲಿ ಮೊದಲ ರಾಂಕ್ ನೊಂದಿಗೆ ಎರಡು ಚಿನ್ನದ ಪದಕ ಮತ್ತು ಪದವಿಯಲ್ಲಿ ಕನ್ನಡ ವಿಷಯದಲ್ಲಿ ಹೆಚ್ಚಿನ ಅಂಕಗಳಿಕೆಗಾಗಿ ಚಿನ್ನದ ಪದಕ ಪಡೆದಿದ್ದಾರೆ. ದೇಸಿ ತಳಿ, ನಾಟಿ ಬೀಜಗಳ ಸಂರಕ್ಷಣೆ ಕುರಿತು ವಿಶೇಷ ಆಸಕ್ತಿ, ಜಲಸಂರಕ್ಷಣೆ, ಸುಸ್ಥಿರ ಕೃಷಿ, ಸಿರಿಧಾನ್ಯ ಚಟುವಟಿಕೆಗಳಿಗೆ ಬೆಂಬಲ. ಜಲಜಾಗೃತಿಗಾಗಿ ಕಾರ್ಯಕ್ರಮ ಸಂಘಟನೆ. ಪಾರಂಪರಿಕ ಜಲನಿಧಿಗಳಾದ ತಲಪರಿಗೆ ಬಗ್ಗೆ ಅಧ್ಯಯನ, ಪುನರುಜ್ಜೀವನಕ್ಕಾಗಿ ಶ್ರಮಿಸುತ್ತಿದ್ದಾರೆ. ಕಳೆದ ಎರಡು ದಶಕಗಳಿಂದ ವಿವಿಧ ಪತ್ರಿಕೆಗಳಲ್ಲಿ ಹವ್ಯಾಸಿ ಬರಹಗಾರರಾಗಿ ಕೃಷಿ ವಿಚಾರಗಳ ಬರವಣಿಗೆ ಮಾಡುತ್ತಿದ್ದಾರೆ. ನೆಟ್ಟಿರಾಗಿ, ತಲಪರಿಗೆ, ನಶಿಸುತ್ತಿರುವ ನೀರಿನ ಜ್ಞಾನ,ಕರ್ನಾಟಕದ ಕೃಷಿ ಆಚರಣೆಗಳು ಸೇರಿ ಒಟ್ಟು 14 ಕೃತಿಗಳು ಪ್ರಕಟವಾಗಿವೆ.

ಆರ್.ಮಂಜುನಾಥ್ (ಕೆರೆ ಮಂಜು) (2023) : ಬೆಂಗಳೂರಿನವರಾಗಿರುವಆರ್.ಮಂಜುನಾಥ್ ಅವರು,1995ರಿಂದವಿವಿಧಮಾಧ್ಯಮಗಳಲ್ಲಿಸೇವೆ ಸಲ್ಲಿಸಿರುವ ಇವರು, ಪ್ರಸ್ತುತ ಪ್ರಜಾವಾಣಿಯಲ್ಲಿ ಹಿರಿಯ ವರದಿಗಾರನಾಗಿ ಸೇವೆಸಲ್ಲಿಸುತ್ತಿದ್ದಾರೆ. ಬೆಂಗಳೂರಿನಕೆರೆಗಳಬಗ್ಗೆ'ನಮ್ಮೂರ್‌ಕೆರೆ'ಎಂಬ ಲೇಖನ ಮಾಲಿಕೆ (2008). ಅರ್ಕಾವತಿ ನದಿ ಪುನಶ್ಚೇತನ, ಧಾರವಾಡ ಕೆರೆಗಳ ಅಭಿವೃದ್ಧಿ, ಬೆಂಗಳೂರಿನಲ್ಲಿರುವ ರಾಜಕಾಲುವೆಗಳ ಒತ್ತುವರಿಯಿಂದ ಮಳೆಗಾಲದಲ್ಲಿ ನೀರು ಬಡಾವಣೆಗಳಿಗೆ ಹರಿಯುತ್ತಿದೆ. ಎಲ್ಲೆಲ್ಲಿ ಎಷ್ಟೆಷ್ಟು ರಾಜಕಾಲುವೆ ಒತ್ತುವರಿಯಾಗಿದೆ ಎಂಬುದನ್ನು ನಕ್ಷೆ ಸಹಿತ ಮಾಹಿತಿಯ ಲೇಖನಗಳು ಸೇರಿ ಕೆರೆಗಳ ರಕ್ಷಣೆ ಬಗ್ಗೆ ಪರಿಣಾಮಕಾರಿ ಲೇಖನಗಳನ್ನು ಪ್ರಕಟಿಸಿದ್ದಾರೆ.

2017ರಿಂದ 2023 ರವರೆಗಿನಅಭಿವೃದ್ಧಿ ಪತ್ರಿಕೋದ್ಯಮ ಪ್ರಶಸ್ತಿ ಪುರಸ್ಕೃತರ ವಿವರ:–

ಚೀ.ಜ.ರಾಜೀವ್(2017):ಚಿಕ್ಕಮಗಳೂರುಜಿಲ್ಲೆ ಅಜ್ಜಂಪುರತಾಲ್ಲೂಕುಚೀರನಹಳ್ಳಿಗ್ರಾಮದವರು. ಪ್ರಸ್ತುತ ಮೈಸೂರಿನಲ್ಲಿ ನೆಲೆಸಿದ್ದಾರೆ.1999ರಿಂದ 2001ರವರೆಗೆಉದಯವಾಣಿ ದಿನಪತ್ರಿಕೆಯಲ್ಲಿ, 2001ರಿಂದ ಇಲ್ಲಿಯವರೆಗೆ ವಿಜಯ ಕರ್ನಾಟಕ ದಿನಪತ್ರಿಕೆಯ ಸುದ್ದಿ ಸಂಪಾದಕರಾಗಿ ಬೆಂಗಳೂರಿನಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಕೃಷಿ, ಶಿಕ್ಷಣ, ಪರಂಪರೆ, ಮತ್ತಿತರ ಕ್ಷೇತ್ರಗಳ ಸವಾಲುಗಳಿಗೆ ಕನ್ನಡಿ ಹಿಡಿಯುವ ಅಭ್ಯುದಯ ಪತ್ರಿಕೋದ್ಯಮಕ್ಕೆಉದಾಹರಣೆಯಾಗುವಂತಹ ವರದಿ ಅಂಕಣಗಳನ್ನು ನಿರಂತರವಾಗಿ ಪ್ರಕಟಿಸುತ್ತಿದ್ದಾರೆ.

ದೇವಯ್ಯ ಗುತ್ತೇದಾರ್ (2018): ಮೂಲತ: ಕಲಬುರಗಿ ಜಿಲ್ಲೆ ಅಫಜಲಪುರ ತಾಲ್ಲೂಕು ಭೈರಾಮಡಗಿ ಗ್ರಾಮದವರು. 2004ರಿಂದ ಉಷಾಕಿರಣ, ಪ್ರಜಾವಾಣಿಯಲ್ಲಿ ಸೇವೆ ಸಲ್ಲಿಸಿ ಪ್ರಸ್ತುತ ವಿಜಯಕರ್ನಾಟಕ ದಿನಪತ್ರಿಕೆಯ ಕಲಬುರಗಿ ಆವೃತ್ತಿಯ ಸ್ಥಾನಿಕ ಸಂಪಾದಕರಾಗಿದ್ದಾರೆ. ಕಲ್ಯಾಣ ಕರ್ನಾಟಕದ ಅಭಿವೃದ್ಧಿ, ಮಾನವ ಅಭಿವೃದ್ಧಿಯಲ್ಲಿ ಉತ್ತರ ಕರ್ನಾಟಕದ ತಾಲ್ಲೂಕುಗಳ ಪರಿಸ್ಥಿತಿ, ಕಲ್ಯಾಣ ಕರ್ನಾಟಕದ ಜಿಲ್ಲೆಗಳ ಬಡತನ ನಿವಾರಣೆ, ಶಿಶುಮರಣ ತಡೆ ಸೇರಿದಂತೆ ಶಿಕ್ಷಣ, ಆರೋಗ್ಯ, ಅಭಿವೃದ್ಧಿ ಕುರಿತ ಅನೇಕ ವಿಶ್ಲೇ?ಷಣಾತ್ಮಕ ಲೇಖನಗಳು, ವರದಿಗಳನ್ನು ಪ್ರಕಟಿಸಿದ್ದಾರೆ.

ಗಿರೀಶ್ ಲಿಂಗಣ್ಣ (2019) : ಬೆಂಗಳೂರಿನ ಗಿರೀಶ್ ಲಿಂಗಣ್ಣ ಅವರು ಮೆಕ್ಯಾನಿಕಲ್ ಇಂಜಿನಿಯರಿಂಗ್ ಸ್ನಾತಕೋತ್ತರ ಪದವೀಧರರಾಗಿದ್ದಾರೆ. ಬಾಹ್ಯಾಕಾಶ, ರಕ್ಷಣೆ, ಅಂತಾರಾಷ್ಟ್ರೀಯ ವ್ಯವಹಾರಗಳ ವಿಶ್ಲೇಷಕ. ಸಂಯುಕ್ತಕರ್ನಾಟಕ,ಕನ್ನಡಪ್ರಭ,ಇಂಡಿಯನ್ ಎಕ್ಸ್ಪ್ರೆಸ್ ದಿನಪತ್ರಿಕೆಗಳ ಜಾಲತಾಣಗಳ ಅಂಕಣಕಾರರಾಗಿದ್ದಾರೆ. ವಿಜಯ ಕರ್ನಾಟಕ, ಉದಯವಾಣಿ, ವಿಶ್ವವಾಣಿ, ಪತ್ರಿಕೆಗಳಲ್ಲಿ ಒನ್ ಇಂಡಿಯ ಜಾಲತಾಣದಲ್ಲಿ ನಿರಂತರ ಲೇಖನಗಳನ್ನು ಬರೆಯುತ್ತಿದ್ದಾರೆ. ವಿವಿಧ ರಾಷ್ಟ್ರೀಯ, ಅಂತಾರಾಷ್ಟ್ರೀಯ ಇಂಗ್ಲಿಷ್ ಪತ್ರಿಕೆಗಳು, ನಿಯತಕಾಲಿಕೆಗಳಲ್ಲಿ ಲೇಖನಗಳು ಪ್ರಕಟವಾಗುತ್ತಿವೆ. ಪ್ರಚಲಿತ ವಿಚಾರಗಳ ಕುರಿತು ಸುವರ್ಣ ನ್ಯೂಸ್, ದೂರದರ್ಶನ, ಆಕಾಶವಾಣಿ,ಚಂದನವಾಹಿನಿಗಳಲ್ಲಿಪ್ಯಾನೆಲಿಸ್ಟ್ ಆಗಿ ಭಾಗಿ. ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದ ಸುದ್ದಿ ವಾಹಿನಿಗಳಲ್ಲಿ ಸಂವಾದ, ಚರ್ಚೆಗಳಲ್ಲಿ ಪ್ಯಾನೆಲಿಸ್ಟ್ ಆಗಿದ್ದಾರೆ.

ಯೋಗೇಶ್ ಎಂ.ಎನ್. (2020): ಮಂಡ್ಯ ಜಿಲ್ಲೆ ಕೆ.ಆರ್.ಪೇಟೆ ತಾಲ್ಲೂಕು ಮಾರೇನಹಳ್ಳಿ ಗ್ರಾಮದವರುಕಳೆದಸುಮಾರು20ವರ್ಷಗಳಿಂದ ಪತ್ರಿಕೋದ್ಯಮದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಪ್ರಸ್ತುತ ಪ್ರಜಾವಾಣಿ ದಿನಪತ್ರಿಕೆಯ ಚಿತ್ರದುರ್ಗ ಜಿಲ್ಲಾ ವರದಿಗಾರರಾಗಿದ್ದಾರೆ. ಭ್ರೂಣಹತ್ಯೆ ತಡೆ, ಉನ್ನತಶಿಕ್ಷಣಸೇರಿದಂತೆಅಭಿವೃದ್ಧಿವಿಷಯಗಳ ಕುರಿತು ಪರಿಣಾಮಕಾರಿ ವರದಿಗಳನ್ನು ಪ್ರಕಟ ಮಾಡಿದ್ದಾರೆ.'ಜೀವಸೆಲೆಕಾಮೇಗೌಡ'ಕೃತಿಯು ಮಂಡ್ಯ ವಿಶ್ವವಿದ್ಯಾಲಯಕ್ಕೆ ಪಠ್ಯವಾಗಿದೆ. ಸಕ್ಕರೆಯಅಕ್ಕರೆ,ವರ್ಣಕೃತಿಗಳುಪ್ರಕಟವಾಗಿವೆ. ಭಾರತೀಯ ರಂಗ ಶಿಕ್ಷಣ ಕೇಂದ್ರದಲ್ಲಿ ತರಬೇತಿ ಪಡೆದಿದ್ದಾರೆ. ವಿವಿಧ ಹವ್ಯಾಸಿ ನಾಟಕಗಳಲ್ಲಿ ಅಭಿನಯಿಸಿದ್ದಾರೆ.

ನೌಶಾದ್ ಬಿಜಾಪುರ (2021) : ಮೂಲತ: ಧಾರವಾಡದವರು. ಪ್ರಸ್ತುತ ಬೆಳಗಾವಿಯಲ್ಲಿ ನೆಲೆಸಿದ್ದು, ದಿ ನ್ಯೂ ಇಂಡಿಯನ್ ಎಕ್ಸ್ಪ್ರೆಸ್ ದಿನಪತ್ರಿಕೆಯ ಹಿರಿಯ ಸಹಾಯಕ ಸಂಪಾದಕರಾಗಿದ್ದಾರೆ. ಕಳೆದ 25 ವರ್ಷಕ್ಕೂ ಹೆಚ್ಚು ಕಾಲದಿಂದ ಡೆಕ್ಕನ್ ಕ್ರೋನಿಕಲ್, ಡೆಕ್ಕನ್ ಹೆರಾಲ್ಡ್, ಇಂಡಿಯನ್ ಎಕ್ಸ್ಪ್ರೆಸ್ ಪತ್ರಿಕೆಗಳಲ್ಲಿ ಸೇವೆ ಸಲ್ಲಿಸಿ ಈಗ ದಿ ನ್ಯೂ ಇಂಡಿಯನ್ ಎಕ್ಸ್ಪ್ರೆಸ್ ದಿನಪತ್ರಿಕೆಯಲ್ಲಿ ಹಲವಾರು ಅಭಿವೃದ್ಧಿ ಮತ್ತು ಸಾಮಾಜಿಕ ಚಿಂತನೆಗಳಿಂದ ಕೂಡಿದ ಲೇಖನ ಹಾಗೂ ವರದಿಗಳನ್ನು ಪ್ರಕಟಿಸಿದ್ದಾರೆ.

ಸತೀಶ್ ಜಿ.ಟಿ (2022) : ಮೂಲತ: ಚಿತ್ರದುರ್ಗದವರು. ಮೈಸೂರು ವಿಶ್ವವಿದ್ಯಾನಿಲಯದಿಂದ ಇಂಗ್ಲೀಷ್ ಸಾಹಿತ್ಯದಲ್ಲಿಸ್ನಾತಕೋತ್ತರಪದವಿಪಡೆದಿದ್ದಾರೆ. 2004ರಿಂದ 2011ರವರೆಗೆ ವಿಜಯ ಟೈಮ್ಸ್, ಡೆಕ್ಕನ್ ಹೆರಾಲ್ಡ್ ಪತ್ರಿಕೆಗಳಲ್ಲಿ ಹಿರಿಯ ವರದಿಗಾರರಾಗಿಸೇವೆಸಲ್ಲಿಸಿದ್ದಾರೆ.2011ರಿಂದ ಈವರೆಗೆ ದಿ ಹಿಂದೂ ದಿನಪತ್ರಿಕೆಯ ಹಾಸನ ವಿಭಾಗದ ವಿಶೇಷ ವರದಿಗಾರರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಅಭಿವೃದ್ಧಿಯ ವಿವಿಧ ಆಯಾಮಗಳ ಮೇಲೆ ಬೆಳಕು ಚೆಲ್ಲುವ ಅನೇಕ ವರದಿಗಳನ್ನುಪ್ರಕಟಿಸಿದ್ದಾರೆ.ವಿನೋದ್ ಮೆಹ್ತಾ ಅವರ ಆತ್ಮಕಥೆ 'ಲಖನೌ ಹುಡುಗ', ವಿನೋದ್ ಕಾಪ್ರಿಅವರ'ಮನೆಸೇರಲು1232ಕಿ.ಮೀ ಸಾಗಿದ ದೂರ',ನ್ಯಾಯಮೂರ್ತಿ ಕೆ.ಚಂದ್ರುಅವರ'ನನ್ನ ದೂರು ಕೇಳಿ ಮಹಿಳೆಯರು ನ್ಯಾಯಾಲಯದ ಕದತಟ್ಟಿದಾಗ'ಅಜಿತ್ ಪಿಳ್ಳೆಅವರ'ಇದುಯಾವ ಸೀಮೆ ಚರಿತ್ರೆ' ಮೊದಲಾದ ಕೃತಿಗಳನ್ನು ಕನ್ನಡಕ್ಕೆ ಅನುವಾದಿಸಿದ್ದಾರೆ.

ಎಸ್.ಗಿರೀಶ್ ಬಾಬು (2023): ಬೆಂಗಳೂರಿನವರಾದ ಎಸ್.ಗಿರೀಶ್ ಬಾಬು ಅವರು ಉದಯಟಿವಿ, ವಿಜಯಕರ್ನಾಟಕ , ಉದಯವಾಣಿ, ಮತ್ತಿತರ ಮಾಧ್ಯಮಗಳಲ್ಲಿ 27 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ. ಪ್ರಸ್ತುತ ಕನ್ನಡಪ್ರಭ ದಿನಪತ್ರಿಕೆಯ ಕಾರ್ಯನಿರ್ವಾಹಕ ಸಂಪಾದಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಬೆಳಗಾವಿಯಲ್ಲಿ ವರದಿಗಾರರಾಗಿ ಕಾರ್ಯ ನಿರ್ವಹಿಸುವ ಅವಧಿಯಲ್ಲಿ ಕೊಕಟನೂರು ಜಾತ್ರೆಯಲ್ಲಿ ಮುತ್ತುಕಟ್ಟುವ (ದೇವದಾಸಿ) ಪದ್ಧತಿ ಬಗ್ಗೆ ಬರೆದ ವರದಿಯು ಈ ಸಾಮಾಜಿಕ ಅನಿಷ್ಟದ ನಿರ್ಮೂಲನೆಗೆ ನೆರವಾಯಿತು. ಶಿಕ್ಷಣ, ಆರೋಗ್ಯ, ಪರಿಸರ , ರಕ್ಷಣೆ, ವಿಜ್ಞಾನ, ತಂತ್ರಜ್ಞಾನ ಬೀಟ್ಗಳಲ್ಲಿ ನೂರಾರು ವರದಿಗಳನ್ನು ಪ್ರಕಟಿಸಿದ್ದಾರೆ.ಭಾರತೀಯರಕ್ಷಣಾಇಲಾಖೆಯು ಪತ್ರಕರ್ತರಿಗಾಗಿನಡೆಸುವಡಿಫೆನ್ಸ್‌ಕರೆಸ್ಪಾಂಡೆನ್ಸ್ ಕೋರ್ಸ್ನಲ್ಲಿ ಭಾಗವಹಿಸಿ ಕಾರ್ಗಿಲ್, ಲೇಹ್ ಸೇರಿದಂತೆ ಮತ್ತಿತರ ಪ್ರದೇಶಗಳಿಗೆ ಭೇಟಿ ನೀಡಿ ವರದಿ ಮಾಡಿರುತ್ತಾರೆ.

ಶೀಘ್ರದಲ್ಲಿಯೇಪ್ರಶಸ್ತಿಪ್ರದಾನಸಮಾರಂಭವನ್ನು ಆಯೋಜಿಸಲಾಗುವುದುಎಂದುಪ್ರಕಟಣೆಯಲ್ಲಿ ತಿಳಿಸಿದೆ.

ಜಿಲ್ಲಾಮಟ್ಟದ ಜಾಗೃತಿ ಉಸ್ತುವಾರಿ ಸಮಿತಿಗೆ ನೇಮಕ

ಬಾದಾಮಿ : ನಗರದ ಯುವ ಮುಖಂಡ ಬಸವರಾಜ ಸಂಗಪ್ಪ ಪಾತ್ರೋಟ ಇವರನ್ನು ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳು (ದೌರ್ಜನ್ಯ ಪ್ರತಿಬಂಧ) ಜಿಲ್ಲಾಮಟ್ಟದ ಜಾಗೃತಿ ಹಾಗೂ ಉಸ್ತುವಾರಿ ಸಮಿತಿಗೆ ನಾಮನಿರ್ದೇಶಿತ ಸದಸ್ಯರನ್ನಾಗಿ ಜಿಲ್ಲಾಧಿಕಾರಿ ಜಾನಕಿ ಕೆ.ಎಂ.ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಡಿಸಿ, ಎಸ್ಪಿ, ಶಾಸಕರು, ಸಂಸದರು, ವಿಪ ಸದಸ್ಯರು, ಮೂರು ಜನ ಎ ಗುಂಪಿನ ಪ.ಜಾತಿಯ ಅಧಿಕಾರಿಗಳು, ಪ.ಜಾತಿ/ಪ.ಪಂ. ವರ್ಗದ ಅಧಿಕಾರೇತರ ಸದಸ್ಯರು ಇಬ್ಬರು ಎಸ್.ಸಿ, ಎಸ್.ಟಿಗೆ ಸೇರಿಲ್ಲದ ಸಂಘ ಸಂಸ್ಥೆಯ ಪದಾಧಿಕಾರಿಗಳು ಹಾಗೂ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಸದಸ್ಯ ಕಾರ್ಯದರ್ಶಿಗಳಾಗಿರುವ ಈ ಸಮಿತಿಯಲ್ಲಿ ಜಿಲ್ಲಾಧಿಕಾರಿಗಳು ಅಧ್ಯಕ್ಷರಾಗಿರುತ್ತಾರೆ. ಪ.ಜಾ, ಪ.ಪಂ. ಜಿಲ್ಲಾಮಟ್ಟದ ಜಾಗೃತಿ ಹಾ

ಜಲ ಬಿರಾದರಿ ಜಿಲ್ಲಾ ಘಟಕದ ಸಭೆ

ವಿಜಯಪುರ : ಕರ್ನಾಟಕ ರಾಜ್ಯ ಜಲ ಬಿರಾದರಿ ಸಂಸ್ಥೆಯ ವಿಜಯಪುರ ಜಿಲ್ಲಾ ಘಟಕದ ಸಭೆ ಸೋಮವಾರ ನಡೆಯಿತು.

ಈ ಸಭೆಯಲ್ಲಿ ಹೊಸ ವರ್ಷ 2025ರಲ್ಲಿ ಸಂಸ್ಥೆಯಿಂದ ಕೈಗೊಳ್ಳಬೇಕಾದ ಕಾರ್ಯಯೋಜನೆ ಏನೆಲ್ಲಾ ತೆಗೆದುಕೊಳ್ಳಬೇಕೆಂದು ಚರ್ಚಿಸಲಾಯಿತು. ವಿಜಯಪುರದ ಐತಿಹಾಸಿಕ ಸ್ಮಾರಕಗಳು, ಬಾವಿಗಳು ಮತ್ತು ಕೆರೆಗಳ ರಕ್ಷಣೆ ಮಾಡುವಲ್ಲಿ ಶ್ರಮವಹಿಸುವುದು.

ವಿಜಯಪುರ ನಗರದ ಸುತ್ತಮುತ್ತವಿರುವ 11.5 ಕಿಲೋಮೀಟರ್ ವಿಸ್ತೀರ್ಣದ ಕೋಟೆ ಗೋಡೆ ಮತ್ತು ಕಂದಕ ಸ್ವಚ್ಛತೆ ಮಾಡಿಸುವುದು. ನಗರದ ಜನ ವಸತಿ ಪ್ರದೇಶಗಳಲ್ಲಿ ಪ್ರವಾಹ ನಿಯಂತ್ರಣಕ್ಕೆ ಸೂಕ್ತ ಕ್ರಮಕೈಗೊಳ್ಳುವಂತೆ ಒತ್ತಾಯ ಮಾಡುವುದು ಇವೇ ಮುಂತಾದ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

ಡೋಣಿ ನದಿ ಪುನರುಜ್ಜೀವನ ಅಭಿಯಾನ ಮುಂದುವರೆಸುವುದು. ಡೋಣಿ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಅವೈಜ್ಞಾನಿಕ ಸೇತುವೆಗಳ ನವೀಕರಣ ಮತ್ತು ವೈಜ್ಞಾನಿಕ ಸೇತುವೆಗಳ ನಿರ್ಮಾಣ ಮಾಡಿ ಹೂಳು ತೆಗೆಸುವುದು. ಡೋಣಿ ನದಿ ಪ್ರವಾಹ ನಿಯಂತ್ರಣಕ್ಕೆ ಬೇಕಾದ ಕ್ರಮವಹಿಸುವುದು. ಪರಿಸರ ಸಂರಕ್ಷಣೆಗೆ ಬೇಕಾದ ಜನ ಜಾಗೃತಿ ಕಾರ್ಯಕ್ರಮ, ವಿಚಾರ ಸಂಕಿರಣಗಳು, ಸಭೆಗಳು ಮತ್ತು ಕಾರ್ಯಾಗಾರಗಳನ್ನು ಆಯೋಜಿಸುವ ಕುರಿತು ಸಹ ಸಭೆಯಲ್ಲಿ ಚರ್ಚೆ ನಡೆಸಲಾಯಿತು.

ಈ ಸಭೆಯಲ್ಲಿ ಜಿಲ್ಲಾ ಅಧ್ಯಕ್ಷ ಪೀಟರ್ ಅಲೆಕ್ಸಾಂಡರ್, ಜಿಲ್ಲಾ ಕಾರ್ಯದರ್ಶಿ ಬಾಳು ಜೇವೂರ, ಕಾನೂನು ಸಲಹೆಗಾರ್ತಿ ವಿದ್ಯಾವತಿ ಅಂಕಲಗಿ, ಗೌರವ ಸಲಹೆಗಾರ ಕೆ.ಎಫ್ ಅಂಕಲಗಿ ಉಪಾಧ್ಯಕ್ಷ ಪ್ರವೀಣ ಪಾಟೀಲ, ಪದಾಧಿಕಾರಿಗಳಾದ ರವೀಂದ್ರ ಪಡಸಲಗಿ, ಯಲ್ಲಪ್ಪ ಇರಕಲ್ ಇದ್ದರು.

ಹಳ್ಳೂರ ಪಿಕೆಪಿಎಸ್ ನೂತನ ಅದ್ಯಕ್ಷ ಮಹಾವೀರ ಛಬ್ಬಿ ಆಯ್ಕೆ

ವರದಿ ಮುರಿಗೆಪ್ಪ ಮಾಲಗಾರ

ಹಳ್ಳೂರ : ಗ್ರಾಮದ ವಿವಿಧೋದ್ದೇಶ ಪ್ರಾಥಮಿಕ ಗ್ರಾಮಿಣ ಕೃಷಿ ಸಹಕಾರ ಸಂಘಕ್ಕೆ ಐದು ವರ್ಷಗಳ ಆಡಳಿತ ಅವಧಿಗೆ ನೂತನ ಅದ್ಯಕ್ಷರಾಗಿ ಮಹಾವೀರ ಛಬ್ಬಿ.ಉಪಾಧ್ಯಕ್ಷರಾಗಿ ಸುವರ್ಣಾ ಪಾಲಬಾಂವಿ ಆಯ್ಕೆಯಾಗಿದ್ದಾರೆಂದು ಚುನಾವಣಾ ರಿಟರ್ನಿಂಗ ಅಧಿಕಾರಿ ಪಿ ವಾಯ್ ಕೌಜಲಗಿ ಹಾಗೂ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ರಾಮಣ್ಣ ಗೌರವ್ವಗೋಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಹಾಗೂ ಸಿಬ್ಬಂದಿಗಳಿದ್ದರು. ಆದ್ಯಕ್ಷ ಉಪಾಧ್ಯಕ್ಷ ಆಯ್ಕೆ ಸಮಯದಲ್ಲಿ ಯಾವುದೆ ಗದ್ದಲ ಉಂಟಾಗದಂತೆ ಜಾಗೃತ ಕ್ರಮವಹಿಸಿದ ಪೊಲೀಸ ಅಧಿಕಾರಿಗಳಾದ ಸಿಪಿಐ ಶ್ರೀಶೈಲ ಬ್ಯಾಕೋಡ. ಪಿಎಸ್ಐ ರಾಜು ಪೂಜೇರಿ ತಮ್ಮ ಕಾರ್ಯವನ್ನು ನಿರ್ವಹಿಸಿದರು.

ಹಣಾಹಣಿಯಲ್ಲಿ ಅಚ್ಚರಿ ಮೂಡಿಸಿ ಅಧ್ಯಕ್ಷರಾಗಿ ಆಯ್ಕೆಯಾದಮಹಾವೀರಛಬ್ಬಿಅವರಬೆಂಬಲಿತರಾದ ಭೀಮಶಿ ಮಗದುಮ್. ಮುಪ್ಪಯ್ಯ ಹಿಪ್ಪರಗಿ.ಶ್ರೀಶೈಲ ಬಾಗೋಡಿ.ಅಡಿವೆಪ್ಪ ಪಾಲಬಾಂವಿ. ಮಾದೇವ ಹೊಸಟ್ಟಿ.ಮಲ್ಲಪ್ಪ ಛಬ್ಬಿ.ಗುರು ಹಿಪ್ಪರಗಿ.ಲಕ್ಷ್ಮಣ ಛಬ್ಬಿ. ಯಮನಪ್ಪ ನಿಡೋಣಿ.ಹನಮಂತ ಬದನಿಕಾಯಿ. ರಾಜು ತಳವಾರ. ರೇವಪ್ಪ ಸಿಂಪಿಗೆರ. ತುಕಾರಾಮ ಸನದಿ. ಬಾಳೇಶ ನೇಸುರ. ಯಾದಪ್ಪ ನಿಡೋಣಿ. ಹನಮಂತ ಪಾಲಬಾಂವಿ. ಭೀಮಶೇಪ್ಪ ತೇರದಾಳ. ಆಯ್ಯಪ್ಪ ಹೀರೆಮಠ. ಬಾಳೇಶ ಶಿವಾಪೂರ. ಈಶ್ವರ ಪಾಲಬಾಂವಿ.ಸಿದ್ಧಪ್ಪಕೂಲಿಗೋಡ.ಶಿವುಶೆಡಬಾಳ್ಕರ. ಮಾದೇವ ಪಾಲಬಾಂವಿ. ಶಿದರಾಯ ಮರಿಚಂಡಿ. ಬಸಪ್ಪ ಹಡಪದ. ರಮೇಶ ಲೋಕನ್ನವರ. ಶ್ರೀಕಾಂತ ಕೌಜಲಗಿ.ಲಕ್ಕಪ್ಪ ಪೂಜೇರಿ.ಲಕ್ಕಪ್ಪ ಸಪ್ತಸಾಗರ.ವಿಠ್ಠಲ ಗೌರವ್ವಗೋಳ.ಲಕ್ಷ್ಮಣ ಕೌಜಲಗಿ. ಜಡೆಪ್ಪ ಮಗದುಮ. ಚರಣ ನಾಶಿ.ಶಿವಪ್ಪ ಮರಿಚಂಡಿ. ಪ್ರಕಾಶ ಅಂಗಡಿ. ಅಪ್ಪು ಬೋಳನ್ನವರ. ಪ್ರಕಾಶ ನುಚ್ಚುಂಡಿ. ಗೋಪಾಲ ಅಟ್ಟಮಟ್ಟಿ. ವಿಠ್ಠಲ ತೋಟಗಿ. ಆನಂದ ಮೂಡಲಗಿ. ಸಚಿನ ಅಜ್ಜನಕಟ್ಟಿ. ಯಲ್ಲಾಲಿಂಗ್ ಹೊಸಟ್ಟಿ.ನಾರಾಯಣ ಪೂಜೇರಿ. ಸಿದ್ದು ಬಡಿಗೇರ ಸೇರಿದಂತೆ ನೂರಾರು ಜನ ಬೆಂಬಲಿತರು ಗುಲಾಲ ಎರಚಿ ಪಟಾಕಿ ಸಿಡಿಸಿ ಸಂಭ್ರಮಿಸಿದರು.

ವಿಚಾರ ಕ್ರಾಂತಿ, ಜ್ಞಾನ ದಾಸೋಹದ ಮೂಲಕ ಕೋಟ್ಯಂತರ ಭಕ್ತರನ್ನು ಗೆದ್ದ ಸಿದ್ದೇಶ್ವರ ಅಪ್ಪನವರು: ಬಸವರಾಜ ಪಾಟೀಲ ಸೇಡಂ

ವಿಜಯಪುರ : ವಿಚಾರ ಕ್ರಾಂತಿಯ, ಜ್ಞಾನ ದಾಸೋಹದ ಮೂಲಕ ಕೋಟ್ಯಂತರ ಭಕ್ತ ಹೃದಯ ಗೆದ್ದ ವ್ಯಕ್ತಿ ಯಾರಾದರೂ ಇದ್ದರೇ ಅವರೇ ಶ್ರೀ ಸಿದ್ದೇಶ್ವರ ಶ್ರೀಗಳು. ನಾವು ನಮ್ಮ ಕಾಯಕದೊಂದಿಗೆ ಪರೋಪಕಾರಿಯಾಗಿ ಜೀವನ ನಡೆಸಿದರೆ ಅಪ್ಪಾಜಿ ಸದಾ ನಮ್ಮ ಜೊತೆಯಲ್ಲಿಯೇ ಇರುತ್ತಾರೆ ಎಂದು ಸೇಡಂನ ಕೊತ್ತಲ ಬಸವೇಶ್ವರ ಶಿಕ್ಷಣ ಸಂಸ್ಥೆ ಸಂರಕ್ಷಕ ಬಸವರಾಜ ಪಾಟೀಲ ಸೇಡಂ ಹೇಳಿದರು.

ನಗರದ ಜ್ಞಾನಯೋಗಾಶ್ರಮದಲ್ಲಿ ನಡೆಯುತ್ತಿರುವ ಶ್ರೀ ಸಿದ್ಧೇಶ್ವರ ಸ್ವಾಮೀಜಿಗಳ ಗುರುನಮನ ಮಹೋತ್ಸವದ 7 ನೇ ಗೋಷ್ಠಿ 'ಸೇವಾಭಾವ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು,

ಸೇವೆ ಮಾಡಬೇಕಾದರೆ ಗಟ್ಟಿ, ಸ್ವಚ್ಛ ಹಾಗೂ ಅಂತಃಕರಣದಮನಸ್ಸನ್ನುಹೊಂದಿರುವುದು ಅವಶ್ಯ. ಯಾವುದೇ ಕೆಲಸ ಮಾಡಿದರೂ ಅದರಲ್ಲಿ ಆಸೆ, ಆಕಾಂಕ್ಷೆ ಸ್ವಾರ್ಥತೆ ಇಲ್ಲದಿದ್ದರೆ ಅದು ನಿಜವಾದ ಸೇವಾಭಾವ. ಅಂತಹ ಸೇವೆಗಳು ಕೇವಲ ಆಶ್ರಮಗಳಲ್ಲಿ ಸಿಗುತ್ತದೆ. ಸಮಾಜದ ಅಸಹಾಯಕರಿಗೆ, ಬುದ್ಧಿ ಮಾಂದ್ಯರಿಗೆ ಆಶ್ರಯ ನೀಡುವ ಸೇವೆಯನ್ನು ಮಾಡುತ್ತಿವೆ. ನಾವು ಆಶ್ರಮ ಸಂಸ್ಕೃತಿಯನ್ನು ಪಾಲಿಸಿಕೊಂಡು ಹೋಗಬೇಕು ಎಂದು ಹೇಳಿದರು.

ಜಗತ್ತಿನ ಹಿತವನ್ನು ಬಯಸಿದ ಶ್ರೇಷ್ಠ ಸಂತ ಶ್ರೀ ಸಿದ್ಧೇಶ್ವರ ಅಪ್ಪನವರ ಸನ್ನಿದಾನದಲ್ಲಿ ನಾವು ಇದ್ದೇವೆ. ಅವರ ಹೇಳಿಕೊಟ್ಟಂತೆ ಒಳ್ಳೆಯದನ್ನು ಹಂಚಬೇಕು. ಹಂಚಿದಷ್ಟು ನಾವು ದೊಡ್ಡವರಾಗುತ್ತೇವೆ. ನಮ್ಮ ಜೀವನದಲ್ಲಿ ಸೇವಾಭಾವವನ್ನು ಬೆಳೆಸಿಕೊಂಡಲ್ಲಿ ಅದೇ ನಾವು ಶ್ರೀ ಸಿದ್ಧೇಶ್ವರ ಅಪ್ಪನವರಿಗೆ ಕೊಡುವ ಗೌರವ ಎಂದು ಹೇಳಿದರು.

ಸೇವಾಭಾವ ಎನ್ನುವುದಕ್ಕೆ ವಿಶೇಷ ಅರ್ಥವಿದೆ. ಈ ದೇಶದಲ್ಲಿ 800 ಕೂ ಅಧಿಕ ಶಾಸ್ತ್ರಗಳಿವೆ. 800 ಶಾಸ್ತ್ರಗಳು ಒಂದುಕ್ಕೊಂದು ಜಗಳವಾಡುವುದಿಲ್ಲ. ಎಲ್ಲರಿಗೂ ಸಹಾಯ ಮಾಡುತ್ತವೆ. ನಿಮ್ಮ ಮನೆ ಮಂದಿಗೆ ಶುದ್ಧ ಮನಸ್ಸಿನಿಂದ ಅಡುಗೆ ಮಾಡಿ ಊಟ ಬಡಿಸಿದರೆ, ಅದು ಶುದ್ಧ ಕಾಯಕವಾಗುತ್ತದೆ.

ಒಬ್ಬ ಸಂಗೀತಕಾರ ಸಂಗೀತದಲ್ಲೇ ಕಾಯಕ ಮಾಡುತ್ತಾ..ಮಾಡುತ್ತಾ ಅಲ್ಲೇ ದೇವರನ್ನು ಕಾಣುಬಹುದು ಎಂದು ಸೇವಾಭಾವವನ್ನು ಅತ್ಯಂತ ಅರ್ಥಗರ್ಭಿತವಾಗಿ ವಿವರಿಸಿದರು.

ಗೋಷ್ಠಿಯಲ್ಲಿ ಶ್ರೀ ಸ್ವಸ್ತಿಶ್ರೀ ಭಟ್ಟಾರಕ ಪಂಡಿತಾಚಾರ್ಯವರ್ಯ ಮಹಾಸ್ವಾಮೀಜಿ ಆಶೀರ್ವಚನ ನೀಡಿ, ಅಜ್ಞಾನ ತೊಡೆದು ಹಾಕಿ ಸುಜ್ಞಾನದ ಹೊಳೆಯನ್ನು ಹರಿಸಿ ನಿರಾಭಾರಿಯಾಗಿ ಬದುಕಿದವರು ಶ್ರೀ ಸಿದ್ಧೇಶ್ವರ ಶ್ರೀಗಳು. ಕಾವಿಧಾರಿಗಳಾದ ಹಲವು ಸಂತರನ್ನು ನಾವು ನೋಡಿದ್ದೇವೆ. ಸನಾತನ ಪರಂಪರೆಯ ಸಂತ, ಈ ಕಾಲದ ಶ್ರೇಷ್ಠ ಸಂತ ಶ್ರೀ ಸಿದ್ದೇಶ್ವರ ಅಪ್ಪನವರ ನೋಡಿದ ನಮ್ಮ ಕಣ್ಣುಗಳೆ ಧನ್ಯ ಎಂದರು.

ಶ್ರೀ ಸಿದ್ದೇಶ್ವರರು ಹೋದಲ್ಲೇ ಅಶ್ರಮವಾಗುತ್ತಿತ್ತು. ಎಷ್ಟು ದೊಡ್ಡ ಸಭೆಗಳು ನಡೆಯುತ್ತಿದ್ದವು. ಅವರ ಶಾಂತ ಧ್ವನಿಯ ನುಡಿಗಳು ಸೂರ್ಯನ ರಶ್ಮಿಗಳಂತೆ ನಿಧಾನವಾಗಿ ಹೊರಹೊಮ್ಮುತ್ತಿದ್ದವು. ಅಂತಹ ತತ್ವಜ್ಞರು ನಮಗೆ ಇಂದಿಗೂ ಬೇಕಾಗಿದ್ದಾರೆ ಎಂದು ಹೇಳಿದರು.

ಎಲ್ಲರಿಗೂ ಜ್ಞಾನ ದಾಹವನ್ನು ನೀಗಿಸಿ ನಮ್ಮ ಕಾಲದ ಅವಧೂತರಾಗಿ ನಮಗೆ ಮಾರ್ಗದರ್ಶನ ಮಾಡಿದ್ದಾರೆ. ಸನಾತನ ಪರಂಪರೆಯ ಉಳಿವಿಗೆ ಜಗತ್ತಿನ ಶಾಂತಿಗೆ ಆಧ್ಯಾತ್ಮ ಶಿಬಿರಗಳನ್ನು ನಡೆಸಿ ಜಗತ್ತಿನ ಒಳಿತನ್ನು ಬಯಸಿದ ನಿಸ್ವಾರ್ಥರು ಎಂದರು.

ಇದೇ ಸಂದರ್ಭದಲ್ಲಿ ಸತ್ಯಜೀತ ಶಿವಾನಂದ ಪಾಟೀಲ ಮಾತನಾಡಿ, ಶ್ರೀ ಸಿದ್ಧೇಶ್ವರ ಅಪ್ಪನರು ಪ್ರವಚನಗಳ ಮೂಲಕ ನಮ್ಮ ನಿಮ್ಮೆಲ್ಲರ ಮಸ್ಸುಗಳನ್ನು ಅರಳಿಸುವ ಕೆಲಸ ಮಾಡಿದ್ದಾರೆ ಎಂದರು.

ವ್ಯಹಾರಿಕ ಯುಗದಲ್ಲಿ ಸೇವಾಭಾವ ಮಾಯವಾಗುತ್ತಿದೆ. ಆದರೆ ಜ್ಞಾನಯೋಗಾಶ್ರಮದಲ್ಲಿ ಸೇವಾಭಾವ, ಭಕ್ತಿ ಹೆಚ್ಚಾಗುತ್ತಿದೆ.ನಮ್ಮಸುತ್ತಮುತ್ತಲಿನಪರಿಸರ, ದೇವರು ಹಾಗೂ ಗುರುಗಳಿಗೆ ಸಲ್ಲಿಸುವ ಸೇವೆಯೇ ನಿಜವಾದ ಸೇವೆ. ಯುವಕರು ಸಾಮಾಜಿಕ ಜಾಲತಾಣಗಳಲ್ಲಿ ಮುಳುಗುವ ಬದಲು ಸತ್ಸಂಗ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಶ್ರೀ ಸಿದ್ಧೇಶ್ವರನ ಆಶೀರ್ವಾದಕ್ಕೆ ಪಾತ್ರವಾಗಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಬೆಂಗಳೂರಿನ ಶ್ರೀ ಕೈಲಾಸ ಆಶ್ರಮ ಮಹಾಸಂಸ್ಥಾನ ಮಠದ ಜಗದ್ಗುರು ಶ್ರೀ ಜಯೇಂದ್ರಪುರಿ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಶ್ರೀ ಸಿದ್ದೇಶ್ವರ ಸ್ವಾಮೀಜಿಯವರು ತಮ್ಮ ಇಡೀ ಜೀವನದುದ್ದಕ್ಕೂ ಜ್ಞಾನಾರ್ಜನೆಯನ್ನೆ ಪವಿತ್ರ ಕಾಯಕದಂತೆ ಪಾಲಿಸಿದರು. ಏಕೆಂದರೆ ದು:ಖದಿಂದ ನಮ್ಮನ್ನು ಕಾಪಾಡುವುದು ಯಾವುದೆಂದರೆ ಜ್ಞಾನ ಮಾತ್ರ ಎಂದರು.

ಅನ್ನದಾನಕ್ಕಿಂತ ದೊಡ್ಡ ದಾನ ವಿದ್ಯಾದಾನ ಅನ್ನದಿಂದ ಸ್ವಲ್ಪ ಸಮಯದ ತೃಪ್ತಿಯನ್ನು ಕೊಡಬಹುದು. ಆದರೆ ವಿದ್ಯೆ ನಮ್ಮ ಇಡೀ ಜೀವನಕ್ಕೆ ತೃಪ್ತಿಯನ್ನು ಕೊಡುತ್ತದೆ. ಅಂತಹ ವಿದ್ಯೆ ಜ್ಞಾನವನ್ನು ನಮ್ಮ ಶ್ರೀ ಸಿದ್ದೇಶ್ವರ ಅಪ್ಪನವರು ನಮ್ಮೆಲ್ಲರಿಗೂ ಕೊಟ್ಟು ಹೋಗಿದ್ದಾರೆ.

ಯಾರೂ ಕೂಡ ಕದಿಯಲು ಸಾಧ್ಯವಿರದಂತಹ ಕೊಡುಗೆಯನ್ನು ನಮಗೆ ಕೊಟ್ಟು ಹೋಗಿದ್ದಾರೆ. ಅವರಿಗೆ ನಾವು ಎಷ್ಟು ಕೃತಜ್ಞರಾಗಿದ್ದರೂ ಕಡಿಮೆ ಎಂದು ಹೇಳಿದರು.

ಸುತ್ತೂರು ಜಗದ್ಗುರು ವೀರಸಿಂಹಾಸನ ಸಂಸ್ಥಾನ ಮಠದ ಪರಮ ಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿದೇಶಿಕೇಂದ್ರಮಹಾಸ್ವಾಮಿಗಳು ಆಶೀರ್ವಚನ ನೀಡಿ, ಜ್ಞಾನದ ಮತ್ತೊಂದು ಅರ್ಥವೇ ಶ್ರೀ ಸಿದ್ದೇಶ್ವರ ಸ್ವಾಮೀಜಿಯವರು ಎನ್ನುವಂತೆ ಬದುಕಿದವರು ಶ್ರೀಗಳು. ಅತ್ಯಂತ ಸರಳ ಬದುಕನ್ನು ನಡೆಸುವ ಮೂಲಕ ಇಡೀ ಜಗತ್ತಿಗೆ ಸರಳತೆಯ ಬಗ್ಗೆ ಪಾಠ ಮಾಡಿದ ಮಹಾತ್ಮರು ಎಂದರು.

ಅವರ ಪ್ರವಚನಗಳು ಅತ್ಯಂತ ಪ್ರಭಾವಶಾಲಿಯಾಗಿದ್ದವು ಎಂತಹುದ್ದೋ ಕಠಿಣ ವಿಷಯವಾಗಿರಲಿ ಅದನ್ನು ಅತ್ಯಂತ ಸರಳವಾಗಿ ಜನರಿಗೆ ಅರ್ಥವಾಗುವ ರೀತಿಯಲ್ಲಿ ಹೇಳುತ್ತಿದ್ದರು. ಸದಾ ಜನತೆಗೆ ಜ್ಞಾನವನ್ನುಉಣಬಡಿಸಲು ಇಚ್ಛಿಸುತ್ತಿದ್ದರು. ಅವರ ಬದುಕೆ ಒಂದು ಸೇವೆಯಾಗಿತ್ತು. ನಿಸ್ವಾರ್ಥ ಮನೋಭಾವದಿಂದ ಅವರು ಬದುಕಿದರೀತಿ ಇಡೀ ಮನುಕುಲಕ್ಕೆ ಮಾದರಿ. ಬದುಕಿದರೆ ಅವರಂತೆ ಬದುಕಬೇಕು. ಅವರು ಹಾಕಿಕೊಟ್ಟ ದಾರಿಯಲ್ಲಿ ನಾವೆಲ್ಲರೂ ಸಾಗಬೇಕು. ಅಂದಾಗ ಮಾತ್ರ ನಾವು ನಿಜವಾಗಿ ಅವರಿಗೆ ಗುರುನಮನ ಸಲ್ಲಿಸಿದಂತೆ ಎಂದರು.

ಜ್ಞಾನಯೋಗಾಶ್ರಮದ ಅಧ್ಯಕ್ಷ ಗುರುಗಳಾದ ಪೂಜ್ಯ ಶ್ರೀ ಬಸವಲಿಂಗ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಶ್ರೀ ಸಿದ್ದೇಶ್ವರ ಅಪ್ಪಾಜಿಯವರು ಸೇವೆ ಯಾವಾಗಲೂ ನಿಸ್ವಾರ್ಥವಾಗಿರಬೇಕು. ಬದುಕು ನಿಸ್ವಾರ್ಥವಾಗಿದ್ದರೆ ನಮ್ಮ ಬದುಕು ಸಾರ್ಥಕವಾಗುತ್ತದೆ ಎಂದು ಸದಾಕಾಲ ಹೇಳುತ್ತಿದ್ದರು. ತಮ್ಮ ಜೀವನವಿಡಿ ನಮ್ಮೆಲ್ಲರಿಗೂ ಜ್ಞಾನದಾಸೋಹ ಮಾಡುತ್ತಲೆ ಕಾಲ ಕಳೆದರು. ಒಂದಿಷ್ಟು ಸಮಯವನ್ನು ಹಾಳು ಮಾಡದೆ ಪ್ರತಿಕ್ಷಣವನ್ನೂ ನಮ್ಮೆಲ್ಲರ ಏಳಿಗೆಗಾಗಿ ಮೀಸಲಿಟ್ಟದ್ದರು ಎಂದು ಹೇಳಿದರು.

ಈ ಸಮಯದಲ್ಲಿ ವಿವಿಧ ಮಠಾಧೀಶರು, ರೈತರು, ನಾಯಕರು, ಸಾವಿರಾರು ಭಕ್ತಾಧಿಗಳು ಉಪಸ್ಥಿತರಿದ್ದರು.

ಉಪನ್ಯಾಸಕ ಸಂಗಮೇಶ ಮೈತ್ರಿ ಸ್ವಾಗತಿಸಿದರು, ಉಪನ್ಯಾಸಕ ಅಮರೇಶ ಸಾಲಕ್ಕಿ ನಿರೂಪಿಸಿದರು.

ಶ್ರೀ ಗವಿಸಿದ್ದೇಶ್ವರ ಜಾತ್ರೆಯಲ್ಲಿ ಟ್ರಾಫಿಕ್ ಸಮಸ್ಯೆಗಳಾಗದಂತೆ ಮುಂಜಾಗ್ರತೆವಹಿಸಿ: ಜಿಲ್ಲಾಧಿಕಾರಿ ನಲಿನ್ ಅತುಲ್

ಕೊಪ್ಪಳ : 2025ನೇ ಜನವರಿ 15 ರಂದು ನಡೆಯುವ ಶ್ರೀ ಗವಿಸಿದ್ದೇಶ್ವರ ಜಾತ್ರೆಗೆ ಲಕ್ಷಾಂತರ ಭಕ್ತರು ಬರುವುದರಿಂದ ಟ್ರಾಫಿಕ್ ಸಮಸ್ಯೆಗಳಾಗದಂತೆ ಪಾರ್ಕಿಂಗ್ ವ್ಯವಸ್ಥೆ ಸೇರಿದಂತೆ ಇತರೆ ಮುಂಜಾಗ್ರತೆ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ನಲಿನ್ ಅತುಲ್ ಸೂಚನೆ ನೀಡಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಶ್ರೀ ಗವಿಸಿದ್ದೇಶ್ವರ ಜಾತ್ರಾ ಮಹೋತ್ಸವದ ನಿಮಿತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳುವ ಕುರಿತು ಅಧಿಕಾರಿಗಳಿಗೆ ಕರೆದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು. ಕಳೆದ ವರ್ಷದಂತೆ ಈ ವರ್ಷವು ಜಾತ್ರೆಗೆ ಬರುವ ಭಕ್ತಾದಿಗಳಿಗೆ ಯಾವುದೇ ಸಮಸ್ಯೆಗಳಾಗದಂತೆ ನೋಡಿಕೊಳ್ಳಬೇಕು. ತುರ್ತು ಸಂದರ್ಭದಲ್ಲಿ ಜನರಿಗೆ ಯಾವುದೇ ಸಮಸ್ಯೆಗಳಾದಲ್ಲಿ ತಕ್ಷಣ ಸೇವೆ ನೀಡಲು ಆರೋಗ್ಯ ಇಲಾಖೆಯ ತಂಡ ತೈಯಾರಿಯಲ್ಲಿ ಇರಬೇಕು. ಅದರಲ್ಲಿ ನುರಿತ ವೈದ್ಯರು ಇರುವಂತೆ ನೋಡಿಕೊಳ್ಳಬೇಕು. ಸ್ವಚ್ಛತೆಗಾಗಿ ಹೆಚ್ಚಿನ ಪೌರ ಕಾರ್ಮಿಕರ ನಿಯೋಜನೆ ಮಾಡಬೇಕು ಮತ್ತು ಸೂಕ್ತ ಕುಡಿಯುವ ನೀರಿನ ವ್ಯವಸ್ಥೆಯನ್ನು ಮಾಡುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಹೇಳಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ ಮಾತನಾಡಿ ಕುಡಿಯುವ ನೀರಿನ ಸಮಸ್ಯೆಗಳಾಗದಂತೆ ಮುಂಜಾಗ್ರತೆಯಾಗಿ ಎರಡು ಕುಡಿಯುವ

ನೀರಿನ ಹೆಚ್ಚುವರಿ ಟ್ಯಾಂಕರಗಳ ವ್ಯವಸ್ಥೆ ಮಾಡಬೇಕು. ಕೆಲವು ಕಡೆ ಓಪನ್ ವೈರಿಂಗ್ ಇರುತ್ತವೆ ಹಾಗಾಗಿ ಜೆಸ್ಕಾಂನವರು ಎಲೆಕ್ಟ್ರಿಕಲ್ ಫಿಟ್ನೆಸ ಕುರಿತು ಪರಿಶೀಲನೆ ಮಾಡಬೇಕು. ಎರಡು ಅಗ್ನಿಶಾಮಕ ದಳದ ವಾಹನಗಳನ್ನು ತೈಯಾರಿಯಲ್ಲಿ ಇಡಬೇಕು ಎಂದು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್.

ಎಲ್ ಅರಸಿದ್ದಿ ಮಾತನಾಡಿ ಟ್ರಾಫಿಕ್ ಸಮಸ್ಯೆಗಳಾಗದಂತೆ ಪಾರ್ಕಿಂಗ್ ವ್ಯವಸ್ಥೆ ಮಾಡಿದ ಮಾಹಿತಿಯನ್ನು ಮುಂಚಿತವಾಗಿ ಮಾಧ್ಯಮಗಳ ಮೂಲಕ ಸಾರ್ವಜನಿಕರಿಗೆ ತಿಳಿಸುವ ಕೆಲಸ ನಮ್ಮ ಇಲಾಖೆಯ ಅಧಿಕಾರಿಗಳು ಮಾಡಬೇಕು.

ಅಲ್ಲದೆ ಪ್ರಮುಖ ಸ್ಥಳಗಳಲ್ಲಿ ಸಿಸಿಟಿವಿ ಅಳವಡಿಸಿಬೇಕು.

ಜಾತ್ರೆಯ ದಿನದಂದು ಅಂದಾಜು 8 ರಿಂದ 10 ಲಕ್ಷ ಜನರು ಸೇರುವುದರಿಂದ ಸೂಕ್ತ ಸಾರಿಗೆ ಜೊತೆಗೆ ಎಲ್ಲಾ ಕಡೆ ಲೈಟಿಂಗ್ ವ್ಯವಸ್ಥೆಯಾಗಬೇಕೆಂದು ಹೇಳಿದರು.

ಈ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ. ಸಹಾಯಕ ಆಯುಕ್ತರಾದ ಮಹೇಶ್ ಮಾಲಗಿತ್ತಿ. ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ರೇಷ್ಮಾ ಹಾನಗಲ್.

ಕೊಪ್ಪಳ ತಹಶಿಲ್ದಾರ ವಿಠಲ್ ಚೌಗಲಾ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿಯ ಆರಕ್ಷಕ ನಿರೀಕ್ಷಕರಾದ ನಾಗರಾಜ ಆರ್. ನಿರ್ಮಿತಿ ಕೇಂದ್ರದ ಶಶಿಧರ. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ. ಗವಿಸಿದ್ದೇಶ್ವರ ಮಠದ ಭಕ್ತರಾದ

ಜಿಲ್ಲಾ ಬಾಲಕಾರ್ಮಿಕ ಯೋಜನೆ: ತಪಾಸಣೆ, ವಿವಿಧಡೆ ದಾಳಿ



ಕೊಪ್ಪಳ : ಕೊಪ್ಪಳ ಜಿಲ್ಲಾ ಬಾಲಕಾರ್ಮಿಕ ಯೋಜನೆಯಡಿ ಜಿಲ್ಲೆಯ ವಿವಿಧೆಡೆ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕರ ತಪಾಸಣೆ ಹಾಗೂ ಖಾಸಗಿ ವಾಹನಗಳಲ್ಲಿ ಮಕ್ಕಳ ಸಾಗಣಿಕೆ ಕಾರ್ಯಾಚರಣೆ ಮೂಲಕ ಬಾಲ ಮತ್ತು ಕಿಶೋರ ಕಾರ್ಮಿಕರನ್ನು ರಕ್ಷಿಸಿ ಅವರಿಗೆ ಪುನರ್ವಸತಿಗೊಳಿಸಲಾಗಿದೆ.

ಕೊಪ್ಪಳ ಜಿಲ್ಲೆಯ ಕನಕಗಿರಿ ತಾಲೂಕಿನ ಮುಸಲಾಪುರ ಗ್ರಾಮದ ಸುತ್ತಮುತ್ತಲಿನ ಹಳ್ಳಿಗಳಲ್ಲಿ ಡಿಸೆಂಬರ್18 ರಂದು ತೆರೆದ ವಾಹನಗಳಲ್ಲಿ ಕೃಷಿ ಚಟುವಟಿಕೆಗಾಗಿ ಮಕ್ಕಳನ್ನು ಸಾಗಣೆ ಮಾಡುವ ವಾಹನಗಳನ್ನು ಆರ್.ಟಿ.ಒ ಅಧಿಕಾರಿಗಳ ಜೊತೆಗೂಡಿ ತಪಸಣೆ ನಡೆಸಲಾಯಿತು. ಈ ಸಮಯದಲ್ಲಿ ವಾಹನಗಳಲ್ಲಿ ಪತ್ತೆಯಾದ ಸುಮಾರು 12 ಅಪ್ರಾಪ್ತ ಮಕ್ಕಳನ್ನು ಕೆಲಸದಿಂದ ಬಿಡುಗಡೆಗೊಳಿಸಿ ಸಮೀಪದ ಶಾಲೆಗಳಿಗೆ ದಾಖಲಿಸಲಾಯಿತು. ಹಾಗೂ ಕಟ್ಟಡ ನಿರ್ಮಾಣ ಕಾರ್ಯಕ್ಕೆ ತೆರಳುತ್ತಿದ್ದ 2 ಬಾಲಕರನ್ನು ವಶಕ್ಕೆ ಪಡೆದು ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸಲಾಯಿತು. ಕೆಲಸಕ್ಕಾಗಿ ತೆರಳುವ ಬಾಲಕಾರ್ಮಿಕರ ತಪಾಸಣೆ ಹಾಗೂ ಖಾಸಗಿ ವಾಹನಗಳಲ್ಲಿ ಮಕ್ಕಳ ಸಾಗಣೆ ಕುರಿತು ತಪಾಸಣೆ, ದಾಳಿಯನ್ನು ಮಾಡಿ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ಬಾಲಕಾರ್ಮಿಕ ಯೋಜನಾ ನಿರ್ದೇಶಕ ಬಸವರಾಜ ಹಿರೇಗೌಡ್ರ, ಗಂಗಾವತಿ ಕಾರ್ಮಿಕ ನಿರೀಕ್ಷಕ ಅಶೋಕ ಎಮ್., ಆರ್.ಟಿ.ಒ ಅಧಿಕಾರಿ ಲಕ್ಷ್ಮೀಕಾಂತ್ ನಾಲ್ವರ್ ಹಾಗೂ ಮಕ್ಕಳ ಸಹಾಯವಾಣಿ–1098 ಸಿಬ್ಬಂದಿಗಳು ಉಪಸ್ಥಿತರಿದ್ದರು.

ಈ ಸಮಯದಲ್ಲಿ ಸಾರ್ವಜನಿಕರಿಗೆ ಕರಪತ್ರಗಳನ್ನು ಹಂಚುವುದರ ಮೂಲಕ 18 ವರ್ಷದ ಒಳಗಿನ ಯಾವುದೇ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳದಂತೆ ಜಾಗೃತಿ ಮೂಡಿಸಲಾಯಿತು.

ಉಚಿತ ಕೌಶಲ್ಯಾಧಾರಿತ ತರಬೇತಿಗೆ ಅರ್ಜಿ ಆಹ್ವಾನ

ಕೊಪ್ಪಳ : ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆಯಿಂದ ಉಚಿತ ಕೌಶಲ್ಯಾಧಾರಿತ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

18 ರಿಂದ 45 ವಯೋಮಾನದ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ, ಯುವತಿಯರಿಗಾಗಿ ಜನವರಿ ತಿಂಗಳಲ್ಲಿ ಹೈನುಗಾರಿಕೆ ಮತ್ತು ಎರೆಹುಳು ಗೊಬ್ಬರ ತಯಾರಿಕೆ ತರಬೇತಿ ಮತ್ತು ಫೆಬ್ರವರಿ ತಿಂಗಳಲ್ಲಿ ಮಹಿಳೆಯರಿಗೆ ವಸ್ತ್ರ ವಿನ್ಯಾಸ (ಹೊಲಿಗೆ) ಉಚಿತ ತರಬೇತಿಗಳು ಆರಂಭವಾಗಲಿದ್ದು, ತರಬೇತಿ ಅವಧಿಯಲ್ಲಿ ಊಟ ಹಾಗೂ ವಸತಿಯು ಉಚಿತವಾಗಿರುತ್ತದೆ.

ಅಭ್ಯರ್ಥಿಗಳು ತಮ್ಮ ಹೆಸರು, ವಿಳಾಸಗಳನ್ನು ನೋಂದಾಯಿಸಲು ಜನವರಿ 10 ಕೊನೆಯ ದಿನವಾಗಿದ್ದು, ಮೊದಲು ಬಂದವರಿಗೆ ಹಾಗೂ ಗ್ರಾಮೀಣ ಭಾಗದವರಿಗೆ ಮೊದಲ ಆದ್ಯತೆ ನೀಡಲಾಗುವುದು.

ತರಬೇತಿಯಲ್ಲಿ ಕೌಶಲ್ಯ, ಸಾಫ್ಟ್ ಸ್ಕಿಲ್ಸ್, ಯೋಗ ತರಬೇತಿ ಹಾಗೂ ಬ್ಯಾಂಕಿಂಗ್ ನಿಂದ ಸಾಲ ಪಡೆದು ಸ್ವ–ಉದ್ಯೋಗ ಪ್ರಾರಂಭಿಸಲು ಬೇಕಾಗುವ ಜ್ಞಾನ, ಸರಕಾರಿ ಯೋಜನೆಗಳು ಮತ್ತು ಯೋಜನಾ ವರದಿ ತಯಾರಿಕೆ ಇನ್ನೇತರ ಮಾಹಿತಿಯನ್ನು ಉಚಿತವಾಗಿ ನೀಡಲಾಗುವುದು.

ತರಬೇತಿಯಲ್ಲಿ ಭಾಗವಹಿಸಲು ಇಚ್ಛಿಸುವ ಆಸಕ್ತರು ನಿರ್ದೇಶಕರು, ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆ, ಹಳಿಯಾಳ, ಉತ್ತರ ಕನ್ನಡ ಜಿಲ್ಲೆ ಈ ವಿಳಾಸಕ್ಕೆ, ದೂ.ಸಂ : 8970145354, 9483485489, 9482188780 ಗೆ ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಸಂಸ್ಕಾರಣಾ ದಿನಾಚರಣೆ: ಜಿಲ್ಲಾಡಳಿತದಿಂದ ಪುಷ್ಪ ನಮನ ಸಲ್ಲಿಕೆ

ಕೊಪ್ಪಳ : ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಸಂಸ್ಕಾರಣಾ ದಿನಾಚರಣೆ ಅಂಗವಾಗಿ ಕೊಪ್ಪಳ ಜಿಲ್ಲಾಡಳಿತದ ವತಿಯಿಂದ ವಿಶ್ವ ವಿಖ್ಯಾತ ಅಮರ ಶಿಲ್ಪಿ ಜಕಣಾಚಾರಿ ಅವರ ಭಾವಚಿತ್ರಕ್ಕೆ ಜನವರಿ 1 ರಂದು ಪುಷ್ಪ ನಮನ ಸಲ್ಲಿಸಲಾಯಿತು.

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಬುಧವಾರ ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಸಂಸ್ಕಾರಣಾ ದಿನಾಚರಣೆಯನ್ನು ಜಿಲ್ಲಾಡಳಿತ ಕಛೇರಿ ಸಭಾಂಗಣದಲ್ಲಿ ಸರಳವಾಗಿ ಆಚರಿಸಲಾಯಿತು. ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ವಿಶ್ವ ವಿಖ್ಯಾತ ಅಮರ ಶಿಲ್ಪಿ ಜಕಣಾಚಾರಿಯವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ್ ಮರಬನಳ್ಳಿ, ಚುನಾವಣಾ ಶಾಖೆಯ ತಹಶೀಲ್ದಾರ ರವಿ ವಸ್ತ್ರದ್, ವಿಶ್ವಕರ್ಮ ಸಮಾಜದ ಮುಖಂಡರಾದ ದೇವೆಂದ್ರಪ್ಪ ಬಡಿಗೇರ, ಈಶಪ್ಪ ಬಡಿಗೇರ, ರುದ್ರಪ್ಪ ಬಡಿಗೇರ, ದೇವಪ್ಪ ಬಡಿಗೇರ, ಕಲ್ಲಪ್ಪ ಬಡಿಗೇರ, ನಿಂಗಪ್ಪ ಬಡಿಗೇರ, ನಿಂಗಪ್ಪ ಬಡಿಗೇರ ಹಾಗೂ ಮತ್ತಿತರರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

ಯುವನಿಧಿ ನೋಂದಣಿ ಪ್ರಕ್ರಿಯೆ ಆರಂಭ: ಪೋಸ್ಟರ್ ಬಿಡುಗಡೆಗೊಳಿಸಿದ ಸಚಿವ ಸತೀಶ್ ಜಾರಕಿಹೊಳಿ

ಬೆಳಗಾವಿ : ಜನತೆಯ ಉಜ್ವಲ ಭವಿಷ್ಯಕ್ಕಾಗಿ ಸರ್ಕಾರದ ಗ್ಯಾರಂಟಿ ಯೋಜನೆಯಡಿಯಲ್ಲಿ ಒಂದಾದ "ಯುವನಿಧಿ ಯೋಜನೆ" ಯಲ್ಲಿ "2024ರ ಯುವನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆ ಆರಂಭ"ಗೊಂಡಿರುವ "ಪೋಸ್ಟರ್ ಮತ್ತು ಬ್ಯಾನರ್"ಗಳನ್ನು ಮಂಗಳವಾರ (ಡಿ.31) ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೋಳಿ ಅವರು ಬಿಡುಗಡೆಗೊಳಿಸಿದರು.

ಈ ಸಂದರ್ಭದಲ್ಲಿ ಬೆಳಗಾವಿ ಉತ್ತರ ವಿಧಾನಸಭಾ ಮತಕ್ಷೇತ್ರದ ಶಾಸಕ ಆಸೀಫ್ (ರಾಜು) ಸೇಠ್, ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಜಿಪಂ ಸಿಇಒ ರಾಹುಲ್ ಶಿಂಧೆ, ಡಿಸಿಪಿ ರೋಹನ್ ಜಗದೀಶ್,

ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಆರ್. ಎಸ್ ಚಿಕ್ಕಮಠ, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ರವಿಶಂಕರ ಚನಾಳ, ಜಿ.ಎಸ್ ಕೋರಸಗಾಂವ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ಬಂಜಾರ ಸಮುದಾಯದ ವಿದ್ಯಾವಂತ ನೀರುದ್ಯೋಗಿಗಳಿಗೆ ಎರಡು ದಿನಗಳ ತರಬೇತಿ ಕಾರ್ಯಗಾರ: ಅರ್ಜಿ ಆಹ್ವಾನ

ಕೊಪ್ಪಳ : ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದಿಂದ ಬಂಜಾರ ಸಮುದಾಯದ ವಿದ್ಯಾವಂತ ನೀರುದ್ಯೋಗಿ ಯುವಕ, ಯುವತಿಯರಿಗೆ ಬಂಜಾರ ಸಂಸ್ಕೃತಿ, ಸಂವಿಧಾನದ ಹಾಗೂ ವೃತ್ತಿ ತರಬೇತಿ ಕರಿತು ಅರಿವು ಮೂಡಿಸಲು ತರಬೇತಿ ಕಾರ್ಯಗಾರವನ್ನು (Work Shop on Culture constution And Guidance) ಏರ್ಪಡಿಸಿದ್ದು, ಈ ಕಾರ್ಯಗಾರಕ್ಕೆ ಆನ್‌ಲೈನ್ ಅಪ್ಲಿಕೇಶನ್ ಮುಖಾಂತರ ಅರ್ಜಿ ಆಹ್ವಾನಿಸಲಾಗಿದೆ.

ಸರ್ಕಾರದ ಆದೇಶದಂತೆ ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮವು ಬಂಜಾರ ಸಮುದಾಯದ ವಿದ್ಯಾವಂತ ನಿರುದ್ಯೋಗಿ ಯುವಕ ಯುವತಿಯರಿಗೆ ಸಂತ ಸೇವಾಲಾಲ್ ಜನ್ಮ ಸ್ಥಳವಾದ ಧಾವಣಗೇರೆ ಜಿಲ್ಲೆಯ ನ್ಯಾಮತಿ ತಾಲ್ಲೂಕಿನ ಭಾಯಾಗಡದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಬೆಂಗಳೂರಿನ ಇಂದಿರಾಗಾಂದಿ ವೃತ್ತಿ ಅಭಿವೃದ್ಧಿ ಕೇಂದ್ರದ ಸಹಯೋಗದೊಂದಿಗೆ ಪ್ರತಿ ತಂಡದಲ್ಲಿ 250 ಅಭ್ಯರ್ಥಿಗಳಂತೆ ಎರಡು ದಿನ ಕಾರ್ಯಗಾರವನ್ನು ಒಟ್ಟು 4 ತಂಡಗಳಲ್ಲಿ 1000 ಅಭ್ಯರ್ಥಿಗಳಿಗೆ ಉಟ ವಸತಿ ಹಾಗೂ ಸಾರಿಗೆ ವ್ಯವಸ್ಥೆಯೊಂದಿಗೆ ವೃತ್ತಿ ತರಬೇತಿ, ಬಂಜಾರ ಸಂಸ್ಕೃತಿ ಹಾಗೂ ಸಂವಿಧಾನ ಕುರಿತು ಅರಿವು ಮೂಡಿಸಲು ನುರಿತ ತರಬೇತು ದಾರರಿಂದ ತರಬೇತಿ ನೀಡುವ ಕಾರ್ಯಾಗಾರವನ್ನು ಆಯೋಜಿಸಲಾಗುತ್ತಿದೆ.

ಇದಕ್ಕೆ ಅಗತ್ಯ ವಿರುವ ವಿದ್ಯಾರ್ಹತೆ ಪಿಯುಸಿ ಮತ್ತು ಮೇಲ್ಪಟ್ಟು ಯಾವುದೇ ಪದವಿ, ಸ್ನಾತ್ತಕೊತ್ತರ ಪದವಿ ಹಾಗೂ ಅದಕ್ಕೂ ಮೇಲ್ಪಟ್ಟ ವಿದ್ಯಾಭ್ಯಾಸವನ್ನು ಹೊಂದಿರುವ ಬಂಜಾರ ಸಮುದಾಯದ ಅಭ್ಯರ್ಥಿಗಳಾಗಿರಬೇಕು. ಈಗಾಗಲೇ ನಿಗಮದ ವೆಬ್‌ಸೈಟ್ https:banjarathanda.karanataka.gov ನಲ್ಲಿ ಆನ್‌ಲೈನ್ ಮೂಲಕವೇ ಅರ್ಜಿ ಸಲ್ಲಿಸಬೇಕಾಗಿರುತ್ತದೆ. ಎರಡು ದಿನಗಳ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆ ಹಾಗೂ ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದ ವತಿಯಿಂದ ಪ್ರಮಾಣ ಪತ್ರ ನೀಡಲಾಗುವುದು. ಯಾವುದೇ ನೋಂದಣಿ ಶುಲ್ಕವಿರುವುದಿಲ್ಲ. ಈ ತರಬೇತಿ ಸಂಪೂರ್ಣ ಉಚಿತವಾಗಿರುತ್ತದೆ ಎಂದು ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತ ವಲಯ ಕಛೇರಿ ಕೊಪ್ಪಳ, ಗದಗ, ವಿಜಯನಗರ, ಬಳ್ಳಾರಿಯ ವಲಯ ಅಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಪರಿಚಿತ ಶವ ಪತ್ತೆ: ವಾರಸುದಾರರ ಪತ್ತೆಗೆ ಮನವಿ

ಕೊಪ್ಪಳ : ಕೊಪ್ಪಳದ ಮುನಿರಾಬಾದ್ ರೈಲ್ವೇ ನಿಲ್ದಾಣದಲ್ಲಿ ಸುಮಾರು 40 ವರ್ಷದ ಅಪರಿಚಿತ ಮಹಿಳೆ ಮೃತ ಪಟ್ಟ ಬಗ್ಗೆ ಗದಗ ರೈಲ್ವೇ ಪೊಲೀಸ್ ಠಾಣೆಯಲ್ಲಿ ಯುಡಿಆರ್ ನಂ: 72/2024 ಕಲಂ:194 ಬಿ.ಎನ್.ಎಸ್.ಎಸ್. ಅಡಿ ಪ್ರಕರಣ ದಾಖಲಾಗಿದೆ.

ಮೃತ ಮಹಿಳೆ ಚಹರೆ: ಮೃತ ಮಹಿಳೆಯು ಸಾದಾರಣ ಮೈಕಟ್ಟು, ಸಾದ ಕಪ್ಪು ಮೈಬಣ್ಣ ಹಾಗೂ ಮೈಮೇಲೆ ಚಾಕಲೇಟ್ ಬಣ್ಣದ ವಸ್ತ್ರ ಧರಿಸಿರುತ್ತಾಳೆ. ಈ ಮೃತ ಮಹಿಳೆ ಚಹರೆ ಪಟ್ಟಿಗೆ ಹೋಲಿಕೆಯಾಗುವಂತಹ ಮಹಿಳೆ ಕಾಣೆಯಾಗಿದ್ದಲ್ಲಿ ಕೂಡಲೇ ಗದಗ ರೈಲ್ವೇ ಪೊಲೀಸ್ ಠಾಣೆ ದೂ.ಸಂ: 08372–278744, ಮೊ.ಸಂ:9480802128, ಇ–ಮೇಲ್: gadagrly@ksp.gov.in ಅಥವಾ ರೈಲ್ವೇ ಪೊಲೀಸ್ ಕಂಟ್ರೋಲ್ ರೂಂ: 080–22871291 ಗೆ ಸಂಪರ್ಕಿಸಿ ಮಾಹಿತಿ ನೀಡುವಂತೆ ಗದಗ ರೈಲ್ವೇ ಪೊಲೀಸ್ ಠಾಣೆ ಪ್ರಕಟಣೆ ಕೋರಿದೆ.

ಪ್ರಧಾನಮಂತ್ರಿ ಶಿಷ್ಯವೇತನಕ್ಕೆ ಅರ್ಜಿ

ಬಾಗಲಕೋಟೆ: ಕೇಂದ್ರೀಯಸೈನಿಕ ಮಂಡಳಿಯ ಜಾಲತಾಣದಲ್ಲಿ ವೃತ್ತಿಪರ ಶಿಕ್ಷಣದಲ್ಲಿ ಪದವಿ ವ್ಯಾಸಂಗಕ್ಕಾಗಿ 2024ನೇ ಪ್ರವೇಶಾತಿ ಪಡೆದ ಮಾಜಿ ಸೈನಿಕರ ಮಕ್ಕಳು ಪ್ರಧಾನಮಂತ್ರಿ ಶಿಷ್ಯವೇತನ ಯೋಜನೆ ಎಂಬ ಶಿರ್ಷಿಕೆಯಲ್ಲಿ ಅರ್ಜಿಯನ್ನು ಸಲ್ಲಿಸು ಕೊನೆ ದಿನ ಜನವರಿ 3, 2025 ವರೆಗೆ ವಿಸ್ತರಿಸಲಾಗಿದೆ. ಅರ್ಹ ಫಲಾನುಭವಿಗಳು ಈ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳುವಂತೆಸೈಜಿಕಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪನಿರ್ದೇಶಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂಸಂ.08354–235434ಗೆ ಸಂಪರ್ಕಿಸಬಹುದಾಗಿದೆ.

ವಿಜ್ಞಾನ ವಸ್ತು ಪ್ರದರ್ಶನಕ್ಕೆ ನೋಂದಣಿ

ಬಾಗಲಕೋಟೆ : ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ ಕೂಡಲಸಂಗಮದಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಅಂಗವಾಗಿ ವಿಜ್ಞಾನದ ಆವಿಷ್ಕಾರಗಳ ಬಗ್ಗೆ ಜಾಗೃತಿ ಮೂಡಿಸಿ, ವೈಜ್ಞಾನಿಕ ಮನೋಭಾವವನ್ನು ಬೆಳೆಸಿಕೊಳ್ಳಲು ಮತ್ತು ವಿಜ್ಞಾನದ ಮಹತ್ವವನ್ನು ಉತ್ತೇಜಿಸಲು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಜನವರಿ 4, 2025 ರಂದು ಬೆಳಿಗ್ಗೆ 9 ಗಂಟೆಗೆ ವೈಜ್ಞಾನಿಕ ವಿಜ್ಞಾನ ವಸ್ತು ಪ್ರದರ್ಶನ ಏರ್ಪಡಿಸಲಾಗಿದೆ.

ವಸ್ತು ಪ್ರದರ್ಶನದಲ್ಲಿ ವಿಜೇತ–ರಿಗೆ ನಗದು ಬಹುಮಾನ ಹಾಗೂ ಪಾರಿತೋಷಕ ಮತ್ತು ಪ್ರಮಾಣ ಪತ್ರ ನೀಡಲಾಗುತ್ತದೆ. ಆಸಕ್ತ ವಿದ್ಯಾರ್ಥಿಗಳು ವಸ್ತು ಪ್ರದರ್ಶನದಲ್ಲಿ ಭಾಗವಹಿಸಲು ಮೊನಂ.9035103019, 7411057751ಗೆ ಕರೆ ಮಾಡಿ ಜನವರಿ 2 ರೊಳಗಾಗಿ ನೋಂದಣಿ ಮಾಡಿಕೊಳ್ಳುವಂತೆ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಸವೇಶ್ವರ ಸಹಕಾರಿ ಬ್ಯಾಂಕಿನ ಅಧ್ಯಕ್ಷರಾಗಿ ಪ್ರಕಾಶ ತಪಶೆಟ್ಟಿ, ಉಪಾಧ್ಯಕ್ಷರಾಗಿ ರವಿ ಪಟ್ಟಣದ ಆಯ್ಕೆ

ಬಾಗಲಕೋಟ : ರಾಜ್ಯದ ಪ್ರತಿಷ್ಠಿತ ಶ್ರೀ ಬಸವೇಶ್ವರ ಸಹಕಾರಿ ಬ್ಯಾಂಕ ನಿ., ಬಾಗಲಕೋಟ ಇದರ ಅಧ್ಯಕ್ಷ ಉಪಾಧ್ಯಕ್ಷರ ಚುನಾವಣೆಯಲ್ಲಿ ಪ್ರಕಾಶ ಈಶ್ವರಪ್ಪ ತಪಶೆಟ್ಟಿಯವರು ಐದು ವರ್ಷಗಳ ಅವಧಿಗೆ ನೂತನ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಗೊಂಡಿದ್ದಾರೆ. ಉಪಾಧ್ಯಕ್ಷರಾಗಿ ರವಿಕುಮಾರ ಯೋಗಪ್ಪ ಪಟ್ಟಣದ ಆಯ್ಕೆಗೊಂಡಿದ್ದಾರೆ ಎಂದು ಚುನಾವಣಾ ಅಧಿಕಾರಿ ಶ್ರೀ ದಾನಯ್ಯ ಹಿರೇಮಠ ಘೋಷಿಸಿದ್ದಾರೆ.

ಬ್ಯಾಂಕಿನ ಪದಾಧಿಕಾರಿಗಳ ಚುನಾವಣೆಯಲ್ಲಿ ನಿರ್ದೇಶಕರಾದ ಮೋಹನ ಗುರಲಿಂಗಪ್ಪ ವಾಲಿ, ಚಂದ್ರಶೇಖರಗೌಡ ತಮ್ಮನಗೌಡ ಪಾಟೀಲ, ಹೂವಪ್ಪ ಸೀತಪ್ಪ ರಾಥೋಡ, ವೀರಪ್ಪ ವಿರುಪಾಕ್ಷಪ್ಪ ಶಿರಗಣ್ಣನ್ನವರ, ಶ್ರೀಶೈಲ ಚನ್ನಬಸಪ್ಪ ಆರಬ್ಬಿ, ಶ್ರೀನಿವಾಸ ತಿಮ್ಮಯ್ಯ ಬಳ್ಳಾರಿ, ಶಶಿಧರ ಶಿವಯೋಗಪ್ಪ ಜಿಗಳೂರ, ಸಿದ್ದಪ್ಪ ಚಿನ್ನಪ್ಪ ಆಡಿನ, ದುರ್ಗಪ್ಪ ತಿಮ್ಮನ್ನ ನಾಯಕ, ಶಂಕರ ಸಂಗಪ್ಪ ಅರಿಶಿನಗೋಡಿ, ಶಂಕರಲಿಂಗ ಮೋನಪ್ಪ ತಪಶೆಟ್ಟಿ, ಸುನೀಲ ಬಾಳಾಸಾಹೇಬ ಕಲಬುರ್ಗಿ, ಶರಣಪ್ಪ ಸಂಗಪ್ಪ ಹೆರಕಲ, ಶ್ರೀಮತಿ ಶೈಲಜಾ ಮಹಾಬಳೇಶ್ವರಯ್ಯ ಗುಡಗುಂಟಿ, ಶ್ರೀಮತಿ ಗೀತಾ ಸುಭಾಸಚಂದ್ರ ನಾರಾ, ಉಪಸ್ಥಿತರಿದ್ದರು.

ಬ್ಯಾಂಕಿನ ಪದಾಧಿಕಾರಿಗಳ ಆಯ್ಕೆಯ ಪ್ರಕ್ರಿಯೆಯಲ್ಲಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ವಿವೇಕಾನಂದ ಕೇಮಾಳಿ, ಬ್ಯಾಂಕಿನ ಅಧಿಕಾರಿಗಳಾದ ಬಿ. ಎಸ್. ನಾವಲಗಿ, ಎಸ್. ಬಿ. ಬದಾಮಿ, ಎಮ್. ಎಸ್. ಗುಡಗುಂಟಿ, ಪಿ. ಎನ್. ಹಳ್ಳಿಕೇರಿ, ವ್ಹಿ. ಎಮ್. ಹಿರೇಮಠ, ರಂಗನಾಥ ಬಡಿಗೇರ, ಶ್ರೀಮತಿ ಜ್ಯೋತಿ ನಾವಲಗಿ, ಕುಮಾರಿ. ಎಸ್. ಎಚ್. ಕುರ್ತಕೋಟಿ, ಅರವಿಂದ ಯಲಿಗಾರ ಮುಂತಾದವರು ಉಪಸ್ಥಿತರಿದ್ದರು.

ಬ್ಯಾಂಕಿನ ಗೌರವಾನ್ವಿತ ಸದಸ್ಯರು ಅಪಾರ ಸಂಖ್ಯೆಯಲ್ಲಿ ಅಭಿಮಾನಿಗಳು ಅಧ್ಯಕ್ಷ , ಉಪಾಧ್ಯಕ್ಷ ಮತ್ತು ನೂತನ ನಿರ್ದೇಶಕರುಗಳಿಗೆ ಹೂ–ಮಾಲೆ ಹಾಕಿ ಗೌರವಿಸಿದರು.

ಅಂಬೇಡ್ಕರ್ ಕುರಿತು ಅಮಿತ್ ಶಾ ಹೇಳಿಕೆಗೆ ಪರಶುರಾಮ ಕೆರೆಹಳ್ಳಿ ತೀವ್ರ ಖಂಡನೆ

ಕೊಪ್ಪಳ : ಸಂವಿಧಾನ ಶಿಲ್ಪಿ ಡಾ.ಬಿ,ಆರ್ ಅಂಬೇಡ್ಕರ್ ಅವರ ಬಗ್ಗೆ ಕೇಂದ್ರ ಗೃಹ ಮಂತ್ರಿ ಅಮಿತ್ ಶಾ ಸಂಸತ್ತಿನಲ್ಲಿ ಅವಹೇಳನಕಾರಿ ಹೇಳಿಕೆ ನೀಡಿರುವುದು ಅತ್ಯಂತ ಖಂಡನೀಯ ಎಂದು ದಲಿತ ಮುಖಂಡರಾದ ಪರಶುರಾಮ್ ಕೆರೆಹಳ್ಳಿ ಹೇಳಿದ್ದಾರೆ.

ಅವರು ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿದ್ದು, ಆರ್.ಎಸ್.ಎಸ್ ಸಿದ್ದಾಂತ ಪ್ರತಿಪಾದಕ ಅಮೀತ ಶಾ ಸಂವಿಧಾನ ಶಿಲ್ಪಿಗೆ ಅಪಮಾನಿಸಿದ್ದು,ಆಶ್ಚರ್ಯವಿಲ್ಲ .ಬಿಜೆಪಿ ತಲ್ಲೆಯಲ್ಲಿ ದೇಶದ ಬಡ,ಅಲ್ಪಸಂಖ್ಯಾತ ದೀನ ದಲಿತರ ಬಗ್ಗೆ ಕಳಕಳಿ ಮತ್ತು ಅಭಿಮಾನ, ಗೌರವ ಹೊಂದಿಲ್ಲ. ಇವರು ಬರೀ ಉಳ್ಳವರ ಪರ ಇದ್ದವರು. ಕಾರ್ಪೋರೇಟ ಸಂಸ್ಕೃತಿಯನ್ನು